# ಹಂಪಿ ಟೈಮ್ಸ್
HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA








ಸಂಪುಟ:01 Volume:01 • ಸಂಚಿಕೆ:231 Issue:231 • ನೋಂದಣಿ ನಂ.:KARKAN27911 Reg.No:KARKAN27911 • ವಿಜಯನಗರ VIJAYANAGARA • 07.02.2024 07.02.2024 • ಬುಧವಾರ Wednesday • ಪುಟ:04 Page:04 • ಬೆಲೆ:2 Rs:2







ಮೈಕ್ರೋ ನ್ಯೂಸ್

## ಅಂಚೆ ವಿಮೆ ಉತ್ಪನ್ನಗಳ ಮಾರಾಟ: ಪ್ರತಿನಿಧಿಗಳ ನಿಯುಕ್ತಿಗೆ ಸಂದರ್ಶನ

**ಹಂಪಿ ಟೈಮ್ಸ್ ಕೊಪ್ಪಳ**

ಅಂಚೆ ಅಧೀಕ್ಷಕರು ಗದಗ ವಿಭಾಗ, ಗದಗ ಇವರು ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಪ್ರಸ್ತಾಪಿಸಿದ್ದು, ಫೆಬ್ರವರಿ 20ರಂದು ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಅರ್ಹತಾ ನಿಯಮಗಳು: ಅಭ್ಯರ್ಥಿಗಳು ಹತ್ತನೇ ತರಗತಿ ಉತ್ತೀರ್ಣರಾಗಿದ್ದು, ಕಡ್ಡಾಯವಾಗಿ 18 ವರ್ಷ ಮೇಲ್ಪಟ್ಟಿರಬೇಕು. ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗ ನಿರತ ಯುವಕರು, ವಿಮಾ ಕಂಪನಿಗಳ ಸಲಹೆಗಾರರು ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ಮಾಜಿ ಗ್ರಾಮ ಪಂಚಾಯಿತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳಿಗೆ ಆಯ್ಕೆಯಾದ ಪಕ್ಷದಲ್ಲಿ ಅವಕಾಶ ನೀಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು ರೂ. 5000 ಗಳನ್ನು ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ್ ವಿಕಾಸ ಪತ್ರ ರೂಪದಲ್ಲಿ ಭದ್ರತಾ ಠೇವಣಿಯನ್ನು ಇಡಬೇಕಾಗುತ್ತದೆ. ಅಯ್ಕೆಯಾದ ನೇರ ಪ್ರತಿನಿಧಿಗಳಿಗೆ ಅವರು ಮಾಡಿದ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮಿಷನ್ ನೀಡಲಾಗುವುದು ಹಾಗೂ ಯಾವುದೇ ನಿಗದಿತ ವೇತನ ಇರುವುದಿಲ್ಲ. ಅಭ್ಯರ್ಥಿಗಳು ಬೇರೆ ಯಾವುದೇ ವಿಮಾ ಕಂಪನಿ/ ಸಂಸ್ಥೆ ಸಂಘಗಳ ಏಜೆಂಟ್ ಆಗಿರಬಾರದು.

ಅರ್ಹ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ, ಶೈಕ್ಷಣಿಕ ಪ್ರಮಾಣಪತ್ರದ ನಕಲುಗಳೊಂದಿಗೆ ಫೆ. 20ರಂದು ಬೆಳಿಗ್ಗೆ 10 ಗಂಟೆಗೆ ಗದಗ ಎಪಿಎಂಸಿ ಯಾರ್ಡ್, ಚೇಂಬರ್ ಆಫ್ ಕಾಮರ್ಸ್ ಎದುರುಗಡೆ ಇರುವ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಗದಗ ವಿಭಾಗದ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.

ಡಿ..ವಿ.ಜಿ.

# ರೈಲ್ವೇ ಮೇಲ್ಸೇತುವೆ ನಿರ್ಮಿಸಿ ಜೀವ ಉಳಿಸಿ

### ನವಮಾಸದ ಕಾಮಗಾರಿ ಪೂರ್ಣಗೊಳಿಸಲು ಒತ್ತಾಯಿಸಿ ಡಿಸಿಗೆ ಮನವಿ | 40 ಅಕ್ಕೂ ಅಧಿಕಬಾರಿ ರೈಲ್ವೇ ಗೇಟ್ ಡೌನ್ | ಪ್ರಯಾಣಿಕರಿಗೆ ತಪ್ಪದ ಕಿರಿಕಿರಿ

**ಹಂಪಿ ಟೈಮ್ಸ್ ಹೊಸಪೇಟೆ**




ವಿಶ್ವ ಪ್ರಸಿದ್ಧ ಹಂಪಿಗೆ ತೆರಳುವ ಮಾರ್ಗದ ಅನಂತಶಯನಗುಡಿ ರೈಲ್ವೆ ಮೇಲ್ಸೇತುವೆ ಎಲ್.ಸಿ.ಗೇಟ್ ನಂ.85ರ ಕಾಮಗಾರಿ 9 ತಿಂಗಳಿಂದ ಸ್ಥಗಿತಗೊಂಡಿದೆ. ರಾಜ್ಯ ಮತ್ತು ಕೇಂದ್ರ ಸರ್ಕಾರ ಸಹಭಾಗಿತ್ವದಲ್ಲಿ ಮೇಲ್ಸೇತುವೆ ನಿರ್ಮಾಣಕ್ಕೆ ಅಗತ್ಯ ಅನುದಾನ ಮತ್ತು ಹೆಚ್ಚುವರಿ 7.5 ಕೋಟಿ ರೂ ನೀಡಲಾಗಿದ್ದರೂ ಕಾಮಗಾರಿ ಆರಂಭಿಸದೆ ವಿಳಂಭ ಮಾಡುತ್ತಿದ್ದಾರೆ. ನಿತ್ಯ 40ಕ್ಕೂ ಅಧಿಕ ರೈಲುಗಳು ಈ ಮಾರ್ಗದಲ್ಲಿ ಸಂಚರಿಸುವುದರಿಂದ ರೋಗಿಗಳಿಗ ಸಕಾಲದೊಳಗೆ ಆಸ್ಪತ್ರೆಗೆ ಸೇರಿ ಚಿಕಿತ್ಸೆ ಪಡೆಯಲಾಗುತ್ತಿಲ್ಲ. ಶಾಲಾ ಕಾಲೇಜುಗಳಿಗೆ ತೆರಳುವ ಮಕ್ಕಳ ಅಳಲು ಕೇಳುವವರಿಲ್ಲದಂತಾಗಿದ್ದು, ಕೂಡಲೇ ಜಿಲ್ಲಾಧಿಕಾರಿಗಳು ಮೇಲ್ಸೇತುವೆ ಕಾಮಗಾರಿ ಆರಂಭಕ್ಕೆ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿ ವಿಜಯನಗರ ರೈಲ್ವೆ ಹೋರಾಟ ಕ್ರಿಯಾಸಮಿತಿ ಮಂಗಳವಾರ ಡಿಸಿ ಎಂ.ಎಸ್.ದಿವಾಕರ ಅವರಿಗೆ ಮನವಿ ಸಲ್ಲಿಸಿತು.

ಕ್ರಿಯಾ ಸಮಿತಿ ಅಧ್ಯಕ್ಷ ವೈ.ಯಮುನೇಶ್ ಮಾತನಾಡಿ, ಮೇಲ್‌ಸೇತುವೆ ನಿರ್ಮಾಣಕ್ಕೆ 2023ರ ಫೆ.27 ರಂದು ಶಂಕುಸ್ಥಾಪನೆ ಮಾಡಿದ್ದು, ಆರಂಭದಲ್ಲಿ 2-3 ತಿಂಗಳ ಕಾಮಗಾರಿಯ ನಂತರ, ಕಳೆದ 9 ತಿಂಗಳಿಂದ ನಿರ್ಮಾಣ ಕಾರ್ಯ ಸ್ಥಗಿತಗೊಂಡಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಬಾಗಿತ್ವದಲ್ಲಿ ಯೋಜನೆಗೆ ಅಗತ್ಯವಾದ ಅನುದಾನವು ಕಳೆದ ವರ್ಷದಲ್ಲಿಯೇ ಬಿಡುಗಡೆಯಾಗಿದೆ. ಅಲ್ಲದೇ ದಿನಾಂಕ 2024 ಫೆ.1 ರಂದು ಮಂಡಿಸಿದ ಕೇಂದ್ರ ಸರ್ಕಾರದ ಮಧ್ಯಂತರ ಬಜೆಟ್‌ನಲ್ಲಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಹೆಚ್ಚುವರಿಯಾಗಿ 7.5 ಕೋಟಿ ಹಂಚಿಕೆ ಮಾಡಲಾಗಿದೆ. ಮೇಲ್ ಸೇತುವೆ ನಿರ್ಮಾಣಕ್ಕೆ ಅಗತ್ಯವಾದ ಅನುದಾನ ಇದ್ದರೂ ಕಾಮಗಾರಿ ವಿಳಂಬಕೆಕ ನಾಗರೀಕರು ಬೇಸತ್ತು ಆಡಳಿತ ವ್ಯವಸ್ಥೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಹೊಸಪೇಟೆಯು ಜಿಲ್ಲಾಕೇಂದ್ರ ಹಾಗೂ ಅಂತರ್‌ರಾಷ್ಟ್ರೀಯಾ ಪ್ರವಾಸಿ ತಾಣವಾಗಿದ್ದು, ವಿಶ್ವ ಪಾರಂಪರಿಕ ತಾಣ ಹಂಪಿ ಹಾಗೂ ಆಂಜನೇಯನ ಜನ್ಮಸ್ಥಳ ಅಂಜನಾದ್ರಿ ನೋಡಲು ದೇಶವಿದೇಶಗಳಿಂದ ಪ್ರತಿನಿತ್ಯ ಆಗಮಿಸುವ ಅಸಂಖ್ಯಾತ ಪ್ರವಾಸಿಗರು ಈ ಮಾರ್ಗದ ರೈಲ್ವೆ ಗೇಟಿನ ಮೂಲಕ ಹಾದು ಹೋಗುತ್ತಾರೆ. ಆದರೆ ಪ್ಯಾಸೆಂಜರ್ ಹಾಗೂ ಗೂಡ್ಸ್‌ಗಾಡಿಗಳ ನಿರಂತರ ಸಂಚಾರದಿಂದ ದಿನದ ಬಹುಪಾಲು ಅವಧಿಯಲ್ಲಿ ರೈಲ್ವೆ ಗೇಟ್ ಮುಚ್ಚುವುದರಿಂದ ಸಕಾಲದಲ್ಲಿ ವಾಹನಗಳ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಅಲ್ಲದೇ ಈ ರೈಲ್ವೆ ಮಾರ್ಗವು ಶಿವಮೊಗ್ಗ - ರಾಯಚೂರು ರಾಜ್ಯ ಹೆದ್ದಾರಿಯಲ್ಲಿದ್ದು, ಪ್ರತಿನಿತ್ಯ ಸಾವಿರಾರು ವಾಹನಗಳು ಈ ರೈಲ್ವೆಗೇಟ್ ಮೂಲಕ ಸಂಚರಿಸುತ್ತವೆ.

ರೈಲ್ವೆ ಗೇಟಿನ ಪೂರ್ವದಿಕ್ಕಿನಲ್ಲಿರುವ ಹಂಪಿ, ಕಮಲಾಪುರ, ಕಡ್ಡಿರಾಂಪುರ, ಮಲಪನಗುಡಿ, ಗಾಳೆಮ್ಮನಗುಡಿ, ಮುಂತಾದ ಗ್ರಾಮಗಳಿಂದ ತ್ವರಿತ ವೈದ್ಯಕೀಯ ಚಿಕಿತ್ಸೆಗೆ ಹೊಸಪೇಟೆಗೆ ಆಗಮಿಸುವ ಗ್ರಾಮಸ್ಥರು ರೈಲ್ವೆ ಗೇಟ್ ಬಂದ್ ಸಂದರ್ಭದಲ್ಲಿ ಸಕಾಲದಲ್ಲಿ ಆಸ್ಪತ್ರೆಗೆ ತೆರಳದೆ ಚಿಕಿತ್ಸೆ ದೊರೆಯದೆ ಅನೇಕರು ಸಾವಿನಪ್ಪಿದ ನಿದರ್ಶನಗಳಿವೆ. ವಿದ್ಯಾರ್ಥಿಗಳು ಶಾಲಾ ಕಾಲೇಜ್‌ಗೆ ಸಕಾಲದಲ್ಲಿ ತೆರಳಲು, ರೈತರು, ಕೃಷಿ ಕಾರ್ಮಿಕರು, ಸಕಾಲದಲ್ಲಿ ಹೊಲಗದ್ದೆಗಳಿಗೆ ತೆರಳಲು ತೊಂದರೆ ಆಗುತ್ತದೆ. ಜಿಲ್ಲಾಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಿ, ಮೇಲ್ ಸೇತುವೆಗೆ ನಿರ್ಮಾಣಕ್ಕೆ ಎದುರಾಗಿರುವ ಅಡೆತಡೆಗಳನ್ನು ನಿವಾರಿಸಿ, ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರು ಹಾಗೂ ವಾಹನಗಳ ಸುಗಮ ಸಂಚಾರಕ್ಕೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಕ್ರಿಯಾ ಸಮಿತಿಯ ಅಧ್ಯಕ್ಷರಾದ ವೈ.ಯಮುನೇಶ್, ಕಾರ್ಯದರ್ಶಿ ಮಹೇಶ್‌ಕುಡತಿನಿ, ಪ್ರಭಾಕರ್.ಪಿ, ನಜೀರ್‌ಸಾಹೇಬ್, ಹೆಚ್.ಮಹೇಶ್, ಆರ್.ಟಿ.ಶರಣಗೌಡ, ಹೆಚ್.ತಿಪ್ಪೇಸ್ವಾಮಿ, ಎಸ್.ಎಸ್.ಸಣ್ಣಕಾಸಿ, ಟಿ.ಆರ್.ತಿಪ್ಪೇಸ್ವಾಮಿ, ಡಿ.ರಾಮಕೃಷ್ಣ, ಜಗದೀಶ್.ಎ.ಎಲ್, ಗೋಪಿನಾಥ, ಡಾ॥ ಎಂ.ಕೆ.ಲಕ್ಷ್ಮಣ, ಎಲ್.ರಮೇಶ್, ಕಂಪ್ಲಿಚಂದ್ರಪ್ಪ, ಎಸ್.ಜಿ.ಶ್ರೀನಿವಾಸ್, ಎಂ.ಲೋಗನಾಥನ್, ಜೆ.ವರುಣ್, ಎಲ್.ರಮೇಶ್, ವೈ.ಶೇಖರ್, ಡಿ.ವಿಶ್ವನಾಥಕೌತಾಳ್, ಪೀರನ್‌ಸಾಬ್, ಇತರರು ಇದ್ದರು.

## ಶೃತಿ ಎಂ.ಎಂ ತಹಶಿಲ್ದಾರರಾಗಿ ಅಧಿಕಾರ ಸ್ವೀಕಾರ





**ಹಂಪಿ ಟೈಮ್ಸ್ ಹೊಸಪೇಟೆ**

ವಿಜಯನಗರ ಜಿಲ್ಲೆಯ ಹೊಸಪೇಟೆ ತಹಶಿಲ್ದಾರರಾಗಿ ಶೃತಿ ಎಂ.ಮಳ್ಳಪ್ಪಗೌಡ ಅವರು ಸೋಮವಾರ ಅಧಿಕಾರ ಸ್ವೀಕರಿಸಿದರು.

ಹೊಸಪೇಟೆ ತಹಶಿಲ್ದಾರರಾಗಿದ್ದ ವಿಶ್ವಜಿತ್ ಮೆಹತಾ ಅವರು ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲ್ಲೂಕಿಗೆ ವರ್ಗಾವಣೆಯಾದ ಹಿನ್ನೆಲೆಯಲ್ಲಿ ಈ ಸ್ಥಾನಕ್ಕೆ ಶೃತಿ ಎಂ.ಮಳ್ಳಪ್ಪಗೌಡ ಅವರು ಸೋಮವಾರ ಅಧಿಕಾರಿ ವಹಿಸಿಕೊಂಡರು. ಕಛೇರಿ ಸಿಬ್ಬಂದಿ ಸ್ವಾಗತಿ ಶುಭಕೋರಿದರು. ಶೃತಿ ಎಂ.ಎಂ ಅವರು ಈ ಹಿಂದೆ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಗ್ರೇಡ್-1 ತಹಶಿಲ್ದಾರರಾಗಿ ಕಾರ್ಯನಿರ್ವಹಿಸುತ್ತಿದ್ದರು.

## ಹಾಸ್ಟೆಲ್‌ಗೆ ರವಿಕುಮಾರ್ ಭೇಟಿ ಪರಿಶೀಲನೆ



**ಹಂಪಿ ಟೈಮ್ಸ್ ಬಳ್ಳಾರಿ**

ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್.ರವಿಕುಮಾರ್ ಅವರು, ತಮ್ಮ ಪ್ರವಾಸ ಸಮಯದಲ್ಲಿ ಬಳ್ಳಾರಿ ನಗರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದೇ ವೇಳೆ ವಸತಿ ನಿಲಯದ ಉಗ್ರಾಣ, ಅಡುಗೆ ಮನೆ, ವಸತಿ ನಿಲಯದ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಮಕ್ಕಳಿಗೆ ಗುಣಮಟ್ಟದ ಆಹಾರ ನೀಡಬೇಕು ಎಂದು ವಸತಿ ನಿಲಯದ ಸಿಬ್ಬಂದಿ ವರ್ಗಕ್ಕೆ ಸೂಚಿಸಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಇನ್ನೀತರರು ಹಾಜರಿದ್ದರು.

## ಪರೀಕ್ಷೆ ವೇಳೆ ಮಕ್ಕಳಿಗೆ ಓದುವ ವಾತಾವರಣ ನಿರ್ಮಿಸಿ

### ಎಂ.ಪಿ.ಎಂ.ಮಂಜುನಾಥ ಪಾಲಕರಿಗೆ ಕಿವಿಮಾತು | ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣ ಸಭೆ




**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**

ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಓದುವ ವಾತಾವರಣ ನಿರ್ಮಾಣವಾದರೆ ಉತ್ತಮ ಫಲಿತಾಂಶದಲ್ಲಿ ತೇರ್ಗಡೆಯಾಗಲು ಸಾಧ್ಯ ಎಂದು ಎನ್.ಎಸ್.ಎಸ್.ಶಿಬಿರದ ಅಧಿಕಾರಿಯಾಗಿ ಎಂ.ಪಿ.ಎಂ.ಮಂಜುನಾಥ ಪಾಲಕರಿಗೆ ಕಿವಿಮಾತು ಹೇಳಿದರು.

ಪಟ್ಟಣದ ಗಂಗಾವತಿ ಭೀಮಪ್ಪನವರ ಸ.ಪ.ಪೂ ಕಾಲೇಜ್‌ನ ಆವರಣದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳ ರಾಷ್ಟ್ರೀಯ ಸೇವಾ ಯೋಜನಾ ಘಟಕದಿಂದ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗಾಗಿ ಅವರ ತಾಯಂದಿರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಮಕ್ಕಳು ಓದುವ ಸಮಯದಲ್ಲಿ ಅವರಿಗೆ ಮನೆಗೆಲಸದ ಹೊರೆಯಾಗಬಾರದು, ಟಿ.ವಿ. ಕೇಬಲ್ ಕಲೆಕ್ಷನ್ ತಪ್ಪಿಸಿ, ಅನಾವಶ್ಯಕವಾಗಿ ಮೊಬೈಲ್‌ನ್ನು ಅವರ ಕೈಗೆ ನೀಡಬೇಡಿ ಎಂದು ತಿಳಿಸಿದರು.

ಎಸ್.ಎಸ್.ಎಲ್.ಸಿ. ಪರೀಕ್ಷೆಯ ನೋದಲ್ ಅಧಿಕಾರಿಯಾದ ಶಿವಲಿಂಗಸ್ವಾಮಿ ಮಾತನಾಡಿ, ಈ ಪರೀಕ್ಷೆ ವೇಳೆ ಮಕ್ಕಳು ಆರೋಗ್ಯವಾಗಿರುವಂತೆ ನೋಡಿಕೊಳ್ಳಿ ಎಂದರು. ಉಪ ಪ್ರಾಚಾರ್ಯ ವಿ.ಮಲ್ಲಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಶಿಕ್ಷಕರಾದ ಡಿ.ವೆಂಕಟೇಶ್ ನಾಯ್ಕ್, ಮಲ್ಲೇಶ್‌ನಾಯ್ಕ್, ಮಲ್ಲಿಕಾರ್ಜುನ, ರಾಜು ಕುಮಾರ್, ಜನಾರ್ಧನ್ ಇದ್ದರು. ವಿದ್ಯಾರ್ಥಿಗಳ ಪಾಲಕರಾದ ತಾಯಂದಿರು ಪಾಲ್ಗೊಂಡಿದ್ದರು. ಶಿಕ್ಷಕಿ ಜಯಶ್ರಿ, ಡಿ.ಭಾರತಿ, ಸುಶೀಲ ನಿರ್ವಹಿಸಿದರು.

## ನಾಳೆಯಿಂದ ಹಡಗಲಿ ತಾಲೂಕಿನ ವಿವಿಧೆಡೆ ಜಾಗೃತಿ ಜಾಥಾ

**ಹಂಪಿ ಟೈಮ್ಸ್ ಹೊಸಪೇಟೆ**

ವಿಜಯನಗರ ಜಿಲ್ಲೆಯ ಹಡಗಲಿ ತಾಲೂಕಿನಲ್ಲಿ ಫೆ.7ರಿಂದ ಫೆಬ್ರವರಿ 11ರವರೆಗೆ ಸಂವಿಧಾನ ಜಾಗೃತಿ ಜಾಥಾ ಸಂಚರಿಸಲಿದೆ.

ಫೆ.7ರಂದು ಮಹಾಜನದಹಳ್ಳಿಯಿಂದ ಆರಂಭವಾಗುವ ಜಾಥಾ ಅಲ್ಲಿಂದ ಇಟ್ಟಿಗಿ, ಉತ್ತಂಗಿ, ಸೋಗಿ, ನಂದಿಹಳ್ಳಿ ಸಂಚರಿಸಿ ನಂತರ ಹೊಳಗುಂದಿ ತಲುಪಿ ಅಲ್ಲಿ ವಾಸ್ತವ್ಯ ಮಾಡಲಿದೆ. ಫೆ.8ರಂದು ಹಿರೇಮಲ್ಲನಕೇರಿ, ಕಾಲ್ವಿ(ಪ), ಸೋವೇನಹಳ್ಳಿ, ಕೊಂಬಳಿ, ನವಲಿ ಗ್ರಾಮಗಳಲ್ಲಿ, ಫೆ.9ರಂದು ದೇವಗೊಂಡನಹಳ್ಳಿ, ನಾಗತಿ ಬಸಾಪುರ, ಎಂ.ಎಂ.ವಾಡ, ಹಿರೇಹಡಗಲಿ ಗ್ರಾಮಗಳಲ್ಲಿ, ಫೆ.10ರಂದು ಹಗರನೂರು, ಕೆ.ಅಯ್ಯನಹಳ್ಳಿ, ಮಾಗಳ, ಬೀರಬ್ಬಿ, ಕತ್ತೆಬೇನ್ನೂರು, ಮಕರಬ್ಬಿ ಗ್ರಾಮಗಳಲ್ಲಿ, ಫೆ.11ರಂದು ಹೊಳಲು, ಮೈಲಾರ, ಕುರುವತ್ತಿ, ಹ್ಯಾರಡ, ದಾಸನಹಳ್ಳಿ ಗ್ರಾಮಗಳಲ್ಲಿ ಜಾಥಾ ಸಂಚರಿಸಲಿದೆ ಎಂದು ಪ್ರಕಟಣೆ ತಿಳಿಸಿದೆ.










ಹಂಪಿ ಟೈಮ್ಸ್ HAMPI TIMES

## ವಚನ ಅರಿವು

### ಗುರುವಾಗುವ ಬಗೆ

**ಗುರುವಾಗುವ ಬಗೆ**
**ಮುಟ್ಟದಿರು ಮೂರುವನು ಮುಟ್ಟಿಸದಿರಾರುವನು**
**ಬಟ್ಟ ಬಯಲಾಗು ಗುರುಹಸ್ತದಿಂದ**
**ಮುಟ್ಟು ಮೂರರ ಅಸುವ ಬಿಟ್ಟು ಕಲೆ ಆರಲಿ ತತ್ವಕೆ**
**ತವಕಿಸದೆ ಗುರುವಾಗು ಕಪಿಲಸಿದ್ಧ ಮಲ್ಲಿಕಾರ್ಜುನಾ.**
**– ಸಿದ್ಧರಾಮೇಶ್ವರ**

ಹೆಣ್ಣು, ಹೊನ್ನು, ಮಣ್ಣುಗಳೆಂಬ ಮನದ ಮುಂದಿರುವ ಮೋಹವನ್ನು ಕಳೆದು ಅರಿಷಡ್ವರ್ಗಗಳಾದ ಕಾಮ, ಕ್ರೋಧ, ಲೋಭ, ಮೋಹ, ಮಧ, ಮತ್ಸರಗಳನ್ನು ಮನಸ್ಸಿಗೆ, ದೇಹಕ್ಕೆ ತಾಕಿಸಿಕೊಳ್ಳದೆ ಬದುಕಬೇಕಾದರೆ ನಿಜ ಗುರುವಿನ ಜ್ಞಾನದ ಅರಿವನ್ನು ಪಡೆಯಬೇಕು. ಅದು ಶರಣರ ವಚನಗಳನ್ನು ತಾತ್ವಿಕ ತಿಳುವಳಿಕೆಯನ್ನು ಅರಿತಿರುವ ಗುರುವಿನಿಂದ, ಅವರ ಹಸ್ತದಿಂದ ಇಷ್ಟಲಿಂಗ ಪಡೆದು, ಅಥವ ಲಿಂಗತತ್ವವನ್ನು ಅರಿತು ಅಳವಡಿಸಿಕೊಂಡರೆ ಜೀವನದ ಜಂಜಾಟಗಳಿಂದ ಹೊರಬಂದು, ಭಾವ ಬಯಲಾಗುತ್ತದೆ. ಇನ್ನೂ ಶರಣರ ವಚನಗಳು ಅರಿವನ್ನು ಮೂಡಿಸುವ ಗುರುವಾಗಿ, ತತ್ವವಾಗಿ ಮಾರ್ಗದರ್ಶನ ಮಾಡುತ್ತವೆ. ನಮ್ಮ ಬದುಕಿನಲ್ಲಿ ಅಳವಡಿಸಿ ಕೊಂಡರೆ ತಮ್ಮ ಅರಿವು ತಮಗೆ ಲಭಿಸುತ್ತದೆ. ತಾವೇ ಗುರುವಾಗುತ್ತಾರೆ. ಗುರು ಮುಟ್ಟಿ ಗುರುವಾಗುವ ಬಗೆ ಇದು.

(ಡಾ. ನಂದೀಶ್ವರ ದಂಡೆ ಅವರ ವಚನ ಜೀವನ ಮಾರ್ಗ ಪುಸ್ತಕದಿಂದ)

**ಮಗುವೊಂದು ಮಣ್ಣಿನ ಮುದ್ದೆಯ ರೂಪ,**
**ಹೇಗೆ ತಿದ್ದುವೆವೋ ಅದರಂತೆಯೇ ಆಗುವ ಪ್ರತಿರೂಪ,**
**ಮನೆಯ ವಾತಾವರಣ ಇರುವಂತೆಯೇ,**
**ಸ್ವಭಾವವಾಗುವ ತದ್ರೂಪ.**
**ಸಂಸ್ಕಾರ, ತಿಳುವಳಿಕೆ, ತಾಳ್ಮೆ, ವರ್ತನೆ ಎನ್ನುವ**
**ಉಳಿಯಿಂದ, ತಿದ್ದಿ ತೀಡಿದರೆ ಮಾತ್ರವೇ,**
**ಸುಂದರ ಮೂರ್ತಿಯಾಗುವಂತಹ ಅನುರೂಪ.**

**– ಲೀಲಾವತಿ ವಿಜಯಕುಮಾರ,**
**ಹ.ಬೊ.ಹಳ್ಳಿ.**

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

ಸಂಪಾದಕರು: **ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ–ಮೇಲ್:hampitimes@gmail.com
M: 9448633038

# ಕರಾವಳಿಯ ಕುಸ್ತಿ ಕುವರಿ ಮಮತಾ ಕೆಲೋಜಿ

ತಾನೊಬ್ಬ ರೈತಾಪಿ ತಾನು ಗಳಿಸಲಾಗದ ಹೆಸರನ್ನು ತನ್ನ ಮಕ್ಕಳು ಗಳಿಸಬೇಕು ತನ್ನಿಂದಾಗದ ಕುಸ್ತಿ ಸೇವೆಯನ್ನು ತನ್ನ ಮಕ್ಕಳಿಂದ ಮಾಡಿಸಬೇಕೆಂಬ ಇಂಗಿತದಲ್ಲಿ ಕುಸ್ತಿ ಏಳಿಗೆಗಾಗಿ ಶ್ರಮಿಸಿದ ಪೈಲ್ವಾನ ದುಸಗಿಯ ಶ್ರೀಯುತ ಮಾರುತಿರವರು.

ಅದೊಂದು ದಿನ ಒಂದು ಫೋನ್ ಕರೆ ಬರುತ್ತದೆ ಹೆಸರಾಂತ ಕುಸ್ತಿ ತರಬೇತುದಾರಾದ ಮಂಜುನಾಥ್ ಸರ್ ಅವರು 23 ವಿದ್ಯಾರ್ಥಿಗಳು ಕುಸ್ತಿ ಹಾಸ್ಟೆಲ್ನಲ್ಲಿ ಇದ್ದಾರೆ ಇನ್ನೂ ಎರಡು ಸೀಟುಗಳು ಲಭ್ಯವಿದೆ ಯಾರಾದರೂ ಆಸಕ್ತಿ ಇರುವ ವಿದ್ಯಾರ್ಥಿಗಳನ್ನು ಕುಸ್ತಿ ಕಲಿಯಲು ಕಳಿಸಿಕೊಡಿ ಎಂದಾಗ ಮರು ಮಾತನಾಡದ ಮಾರುತಿಯವರು ತನ್ನ ಸ್ನೇಹಿತ ಹಾಗೂ ತನ್ನ ಮಗಳಾದ ಮಮತಾರವರನ್ನು ಕ್ರೀಡಾ ಹಾಸ್ಟೆಲ್ ಗೆ ಸೇರಿಸುತ್ತಾರೆ.

ಕಾರವಾರದಲ್ಲಿ ಅಥ್ಲೆಟಿಕ್ಸ್ ಮತ್ತು ಕುಸ್ತಿ ತರಬೇತಿಯನ್ನು ಒಂದೇ ಸ್ಥಳದಲ್ಲಿ ತರಬೇತಿ ನೀಡಲಾಗುತ್ತಿತ್ತು, ಅಲ್ಲಿ ಕುಸ್ತಿ ತರಬೇತಿಗೆ ಬಳಸುತ್ತಿದ್ದ ಕುಸ್ತಿ ಮ್ಯಾಟ್ ಗಳನ್ನು ಜೋಡಿಸಿ(ಹಾಸಿ)ತರಬೇತಿ ಪಡೆದು ಮತ್ತೆ ಅವುಗಳನ್ನು ಬದಿಗೆ ತೆಗೆದಿಟ್ಟು ಹೋಗಬೇಕಾಗಿತ್ತು ಅದು ನಮಗೆ ಬಹಳ ಸಮಯ ಮತ್ತು ಶ್ರಮದಾಯಕವಾಗಿತ್ತು ಎಂದು ಹೇಳುತ್ತಾರೆ ಮಮತಾರವರು.

ಕಾರವಾರದಿಂದ ಕುಸ್ತಿ ಹಾಸ್ಟೆಲ್ ಬೇರ್ಪಟ್ಟಾಗ ನಿಜವಾದ ಕುಸ್ತಿ ಎಂದರೇನು ಎಂದು ನನಗೆ ಆಗ ತಿಳಿಯಿತು ನನಗೇನು ಪ್ರಾಥಮಿಕ ಹಂತಗಳ ಬಗ್ಗೆ ತಿಳಿದಿರದೆ ಅಪ್ಪನ ಆಸೆಗಾಗಿ ಮತ್ತು ಹಾಸ್ಟೆಲ್ ನಲ್ಲಿ ಇದ್ದು ಬಂದಂತಹ ತನ್ನೂರಿನ ಸ್ನೇಹಿತೆಯರು ಹೇಳಿದಾಗ ನಾನು ಕೂಡ ಹಾಸ್ಟೆಲ್ನಲ್ಲಿ ಇರಬೇಕು ಎಂಬ ಆಸೆಯಿಂದ ಸೇರಿಕೊಂಡೆ ಆದರೆ ಇಷ್ಟೊಂದು ತರಬೇತಿ ಇರುತ್ತದೆ(ದೈಹಿಕ ಕಸರತ್ತು ಮತ್ತು ಮ್ಯಾಟ್ ಮೇಲಿನ ಕೌಶಲ್ಯಗಳ ತರಬೇತಿ)ಎಂಬುದು ನನ್ನ ಕಲ್ಪನೆಯಲ್ಲಿ ಇರಲಿಲ್ಲ ಎನ್ನುತ್ತಾರೆ ಮಮತಾ.

ತಮ್ಮ ಪ್ರಾಥಮಿಕ ಕೌಶಲ್ಯಗಳನ್ನು ಮಂಜುನಾಥ್ ಸರ್ ರವರಿಂದ ಕಲಿತೆ,ತಂದೆಯವರು ಕೂಡ ಪೈಲ್ವಾನರಾಗಿದ್ದರು ಅದು ನನ್ನ ರಕ್ತಗತದಲ್ಲೇ ಬಂದಿದ್ದರ ಪರಿಣಾಮ ಅದಕ್ಕೆ ಬೇಗ ಹೊಂದಿಕೊಳ್ಳಲಾಯಿತು ಎಂದು ಅಭಿಪ್ರಾಯಿಸುತ್ತಾರೆ ಮಮತಾ. ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲೂಕಿನ ದುಸಗಿ ಇವರ ಹುಟ್ಟೂರು,ತಂದೆ–ಮಾರುತಿ,ತಾಯಿ–ದ್ರೌಪದ ಇವರದು ರೈತ ಕುಟುಂಬ.

ಮಮತಾ ಪ್ರಾಥಮಿಕ ಶಿಕ್ಷಣವನ್ನು ದುಸಗಿ ಮತ್ತು ಕಾರವಾರದಲ್ಲಿ ಮುಗಿಸಿದ್ದು 06–08 ನೇ ತರಗತಿಯವರೆಗೆ ಹಳಿಯಾಳ ಹಾಗೂ 09 ರಿಂದ 12 ರವರೆಗೆ ಮೂಡುಬಿದ್ರೆಯ ಆಳ್ವಾಸ್ ಶಿಕ್ಷಣ ಸಂಸ್ಥೆಯಲ್ಲಿ ಪಡೆದಿರುತ್ತಾರೆ. ಬಿ,ಕಾಂ.ಪದವಿದರೆ ಆಗಿರುವ ಇವರು ತಮ್ಮ ಪದವಿಯನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಳಿಯಾಳದಲ್ಲಿ ಮುಗಿಸಿರುತ್ತಾರೆ.

ಸದ್ಯ ಪಂಜಾಬ್ ನ ಪಾಟಿಯಾಲ ದಲ್ಲಿ ಕುಸ್ತಿ ಸರ್ಟಿಫಿಕೇಟ್ ಕೋರ್ಸ್ ನ ತರಬೇತಿ ಪಡೆಯುತ್ತಿದ್ದು ಜೊತೆಗೆ ಖೇಲೊ ಇಂಡಿಯಾ ತರಬೇತುದಾರಳಾಗಿ ಒಂದು ವರ್ಷದಿಂದ ಹಳಿಯಾಳದ ಕುಸ್ತಿ ತರಬೇತಿ ಕೇಂದ್ರದಲ್ಲಿ ಶ್ರಮಿಸುತ್ತಿದ್ದಾರೆ.

ತನ್ನ ತಂದೆಯವರು ದಿನನಿತ್ಯ ದುಸ್ಕಿಯಿಂದ 10 ಕಿಲೋಮೀಟರ್ ದೂರದ ಹಳಿಯಾಳಕ್ಕೆ ಬೆಳಗ್ಗೆ 05 ಗಂಟೆಗೆ ಕರೆದುಕೊಂಡು ಬಂದು 08 ಗಂಟೆಗೆ ತಮ್ಮ ಮೋಟರ್ ಸೈಕಲ್ ನಲ್ಲಿ ವಾಪಸ್ ಮನೆಗೆ ಕರೆದುಕೊಂಡು ಹೋಗುತ್ತಿದ್ದರು. ನಂತರ ಮತ್ತೆ ನಾನು ಕಾಲೇಜಿಗೆ ಬಸ್ಸಿನಲ್ಲಿ ಬಂದು ಕಾಲೇಜು ಮುಗಿದ ನಂತರ ಕುಸ್ತಿ ತರಬೇತಿ ಪಡೆದು ಸಂಜೆ 07 ಗಂಟೆವರೆಗೆ ತರಬೇತಿ ಪಡೆದು ನಂತರ ತಂದೆಯವರು ನನ್ನನ್ನು ಕರೆದುಕೊಂಡು ಮನೆಗೆ ಹೋಗುತ್ತಿದ್ದರು ಎಂದಾಗ ದಂಗಲ್ ಸಿನಿಮಾ ನೆನಪಾಯಿತು.








**ಡಾ.ಸುಧಾಕರ ಜಿ.ಲಕ್ಕವಳ್ಳಿ**
**ಕ್ರೀಡಾ ಲೇಖಕರು, 8747969381**

### ಕ್ರೀಡಾ ಸಾಧನೆಗಳು

2014–ಸ್ವಾಮಿ ವಿವೇಕಾನಂದ ಪೈಕ ಗ್ರಾಮೀಣ ರಾಷ್ಟ್ರಮಟ್ಟದ ಆರನೇ ಕುಸ್ತಿ ಕ್ರೀಡಾಕೂಟ (ಮಹಾರಾಷ್ಟ್ರ) ಮೂರನೇ ಸ್ಥಾನ.

2015–18 ನೇ ಬಾಲಕಿಯರ ಕೆಡೆಟ್ ರಾಷ್ಟ್ರಮಟ್ಟದ ಕುಸ್ತಿ ಸ್ಪರ್ಧೆ ರಾಂಚಿ ಜಾರ್ಖಂಡ್ನಲ್ಲಿ ಭಾಗವಹಿಸಿರುತ್ತಾರೆ.

2016–ಮಿನಿಸ್ಟ್ರಿ ಆಫ್ ಯೂತ್ ಅಫೇರ್ಸ್ ಅಂಡ್ ಸ್ಪೋರ್ಟ್ಸ್ ನ್ಯಾಷನಲ್ ಲೆವೆಲ್ ರೂರಲ್ ಸ್ಪೋರ್ಟ್ಸ್ ಕಾಂಪಿಟೇಶನ್ (ತೆಲಂಗಾಣ)–ದ್ವಿತೀಯ ಸ್ಥಾನ ಪಡೆದಿರುತ್ತಾರೆ.

2016–19 ವರ್ಷ ವಯೋಮಾನದೊಳಗಿನ 62ನೇ ರಾಷ್ಟ್ರೀಯ ಸ್ಕೂಲ್ ಗೇಮ್ಸ್ ಕುಸ್ತಿ ಸ್ಪರ್ಧೆಯಲ್ಲಿ (ಮಧ್ಯಪ್ರದೇಶ) ಭಾಗವಹಿಸಿರುತ್ತಾರೆ.

2017–20 ನೇ ಬಾಲಕಿಯರ ಸಬ್ ಜೂನಿಯರ್ ಕೆಡೆಟ್ ನ್ಯಾಷನಲ್ ರೆಸ್ಲಿಂಗ್ ಚಾಂಪಿಯನ್ಶಿಪ್ (ಆಂಧ್ರಪ್ರದೇಶ)–ದ್ವಿತೀಯ ಸ್ಥಾನ.

2018–63 ನೇ ನ್ಯಾಷನಲ್ ಸ್ಕೂಲ್ ಗೇಮ್ಸ್ ರೆಸ್ಲಿಂಗ್ ಕಾಂಪಿಟೇಶನ್(19 ವರ್ಷದೊಳಗಿನ ವಯೋಮಾನ) ದೆಹಲಿ–ತೃತಿಯ ಸ್ಥಾನ.

2019–2020–21(ಗುಜರಾತ್)ಮತ್ತು 22(ಹಿಮಾಚಲ ಪ್ರದೇಶ)ನೇ ವುಮೆನ್ಸ್ ಜೂನಿಯರ್ ನ್ಯಾಷನಲ್ ರೆಸ್ಲಿಂಗ್ ಚಾಂಪಿಯನ್ಶಿಪ್ಗಳಲ್ಲಿ ಭಾಗವಹಿಸಿರುತ್ತಾರೆ.

2018–19 ಕ್ರಮವಾಗಿ 02 ಬಾರಿ ಧಾರವಾಡ ವಿಶ್ವವಿದ್ಯಾನಿಲಯದ ಕುಸ್ತಿಪಟುವಾಗಿ ಅಂತರ ವಿಶ್ವವಿದ್ಯಾನಿಲಯದಲ್ಲಿ ಪ್ರತಿನಿಧಿಸಿರುತ್ತಾರೆ.

2017– ಗ್ರೀಕ್ ನ ಆಥೇನ್ಸ್ ನಲ್ಲಿ ನಡೆದ ಕೆಡೆಟ್ ವರ್ಲ್ಡ್ ಚಾಂಪಿಯನ್ಶಿಪ್ ನಲ್ಲಿ ಭಾಗವಹಿಸಿರುತ್ತಾರೆ.

ಇದಲ್ಲದೆ ಹಲವಾರು ಮುಕ್ತ ಕುಸ್ತಿ ಪಂದ್ಯಾವಳಿಗಳಲ್ಲಿ ಭಾಗವಹಿಸಿ ಸಾಕಷ್ಟು ಪದಕ,ಪ್ರಶಸ್ತಿ,ನಗದು, ಪದಕಗಳನ್ನು ಪಡೆದಿದ್ದು ಅವುಗಳಲ್ಲಿ ಮುಖ್ಯವಾಗಿ 2015–ಹಳಿಯಾಳದಲ್ಲಿ ನಡೆದ ಕುಸ್ತಿ ಸ್ಪರ್ಧೆಯಲ್ಲಿ ಭಾಗವಹಿಸಿ 'ಉದಯೋನ್ಮುಖ ಕುಸ್ತಿಪಟು' ನಾಮಫಲಕದೊಂದಿಗೆ ಬೆಳ್ಳಿ ಗದೆಯನ್ನು ಪಡೆದಿರುತ್ತಾರೆ.

2016–ಆಳ್ವಾಸ್ ನಲ್ಲಿ ನಡೆದ ಕುಸ್ತಿ ಸ್ಪರ್ಧೆಯಲ್ಲಿ ಭಾಗವಹಿಸಿ 'ನುಡಿ ಸಿರಿ ಕಿಶೋರಿ' ನಾಮಫಲಕದೊಂದಿಗೆ ಬೆಳ್ಳಿ ಖಡ್ಗವನ್ನು ಪಡೆದಿರುತ್ತಾರೆ.

2016–ಮಂಗಳೂರಿನಲ್ಲಿ ನಡೆದ ಕುಸ್ತಿ ಸ್ಪರ್ಧೆಯಲ್ಲಿ ಭಾಗವಹಿಸಿ 'ಜನನಿ ಶ್ರೀ' ನಾಮಫಲಕೊದೊಂದಿಗೆ ಪಾರಿತೋಷಕವನ್ನು ಪಡೆದಿರುತ್ತಾರೆ.

2018–ಹಳಿಯಾಳದಲ್ಲಿ ನಡೆದ ಕುಸ್ತಿ ಸ್ಪರ್ಧೆಯಲ್ಲಿ ಭಾಗವಹಿಸಿ ಮಹಿಳಾ ಚಾಂಪಿಯನ್ ನಾಮಫಲಕ ಮತ್ತು ಬೆಳ್ಳಿಗೆಯನ್ನು ಪಡೆದಿರುತ್ತಾರೆ.

ಇವರು ಮಂಜುನಾಥ್, ತುಕಾರಾಮ ಗೌಡಾ, ಕಾಡೆಶ್ ನ್ಯಾಮಗೌಡ, ಶಿವಪ್ಪಪಾಟೀಲ್,ಬಾಲಕೃಷ್ಣ ದಡ್ಡಿ, ಇವರುಗಳಿಂದ ತರಬೇತಿ ಪಡೆದಿರುತ್ತಾರೆ. ಆಳ್ವಾಸ್ ಶಿಕ್ಷಣ ಸಂಸ್ಥೆಯ ಕುಸ್ತಿ ತರಬೇತುದಾರರಾದ ತುಕಾರಾಮ ಗೌಡಾ ಸರ್ ರವರು ನಮಗೆ ಎಲ್ಲರಂತೆ ತರಬೇತಿ ನೀಡುತ್ತಿದ್ದರು ಹೆಚ್ಚಿನ ಆಸಕ್ತಿ ಹೊಂದಿರುವ ಕ್ರೀಡಾಪಟುಗಳಿಗೆ ಹಾಗೂ ಪದಕ ಪಡೆಯಲೇಬೇಕೆಂಬ ಆತ್ಮವಿಶ್ವಾಸದಿಂದಿರುವ ಕ್ರೀಡಾಪಟುಗಳಿಗೆ ನೀವು ನಿಮಗೆ ದೊರೆಯುವ ಸಮಯದಲ್ಲಿ ಇನ್ನಷ್ಟು ಪ್ರಾಕ್ಟೀಸ್ ಮಾಡಬೇಕು ಎಂಬ ಪ್ರೇರಣ ನುಡಿಗಳನ್ನು ಆಡುತ್ತಿದ್ದರು ಇದರಿಂದ ಪ್ರೇರೇಪಿತಗೊಂಡು ವಿಶೇಷ ಸಾಧನೆಯನ್ನು ಮಾಡಿದ್ದೇನೆ ಈ ಸಾಧನೆಗೆ ಆಳ್ವಾಸ್ ಶಿಕ್ಷಣ ಸಂಸ್ಥೆ ಸಾಕಷ್ಟು ಸಹಕಾರ ನೀಡಿದೆ ವಿಶೇಷ ತರಬೇತಿ,ಉಚಿತ ಶಿಕ್ಷಣ ಊಟ ಮತ್ತು ವಸತಿ ವ್ಯವಸ್ಥೆ ಹಾಗೂ ಕ್ರೀಡಾಕೂಟಾದಡಿ ಆಯ್ಕೆಯಾದ ಕ್ರೀಡಾ ವಿದ್ಯಾರ್ಥಿಗಳಿಗೆ ವಿಶೇಷ ಶಿಕ್ಷಣ ವ್ಯವಸ್ಥೆ ಮಾಡಿ ನಮ್ಮನ್ನು ಪ್ರೋತ್ಸಾಹಿಸಿದೆ ನನ್ನ ಕ್ರೀಡಾ ಸಾಧನೆಯಲ್ಲಿ ಇವರೆಲ್ಲರ ಪಾತ್ರ ಪ್ರಮುಖವಾದದ್ದು ಎಂದು ನುಡಿಯುತ್ತಾರೆ ಮಮತಾ.

ಮಹಿಳಾ ಕ್ರೀಡಾಪಟುಗಳು ತಮಗೆ ದೊರೆತಿರುವ ಅವಕಾಶವನ್ನು ಸರಿಯಾಗಿ ಬಳಸಿಕೊಂಡು ಕ್ರೀಡಾ ಸಾಧನೆಯನ್ನು ಮಾಡಿ ದೇಶಕ್ಕೆ ಕೀರ್ತಿ ತಂದು ಕೊಡುವುದರೊಂದಿಗೆ ತಮಗೆ ಲಭ್ಯವಾಗುವ ಸರ್ಕಾರಿ ಅಥವಾ ತಮಗೆ ಸರಿಹೊಂದುವ ಉದ್ಯೋಗವನ್ನು ಪಡೆದು ಕ್ರೀಡಾ ಏಳಿಗೆಗಾಗಿ ಶ್ರಮಿಸಬೇಕು.

ಸರ್ಕಾರಗಳು ಇತರೆ ಕ್ರೀಡೆಗಳಿಗೆ ನೀಡಿರುವ ಉದ್ಯೋಗ ಅವಕಾಶಗಳಂತೆ ಕುಸ್ತಿ ಕ್ರೀಡೆಯ ಕ್ರೀಡಾಪಟುಗಳಿಗೂ ನೀಡಬೇಕು ಹಾಗೂ ಈಗ ನೀಡಿರುವ ರಿಸರ್ವೇಶನ್ ಪ್ರಮಾಣವನ್ನು ಹೆಚ್ಚಿಸಬೇಕೆಂಬ ಇಂಗಿತವನ್ನು ವ್ಯಕ್ತಪಡಿಸುತ್ತಾರೆ ಮಮತಾರವರು.

ನೈಸರ್ಗಿಕವಾಗಿ ದೊರೆಯುವ ಆಹಾರ ಪದಾರ್ಥಗಳನ್ನು ಬಳಸಿ ದೈಹಿಕ ತರಬೇತಿಯನ್ನು ಪಡೆದರೆ ಅದು ಹೆಚ್ಚಿನ ಸಮಯದವರೆಗೆ ನಿಮ್ಮನ್ನು ಕ್ರೀಡೆಯಲ್ಲಿ ಉಳಿಯುವಂತೆ ಮಾಡುತ್ತದೆ ಆದಕಾರಣ ಲಭ್ಯವಿರುವ ನೈಸರ್ಗಿಕ ಪೋಷಕಾಂಶ ಭರಿತ ಸಮತೋಲಿತ ಆಹಾರ ಸೇವಿಸಬೇಕು ಅದರೊಂದಿಗೆ ಕಠಿಣ ಅಭ್ಯಾಸ ಮತ್ತು ಸರಿಯಾದ ವಿಶ್ರಾಂತಿ, ತರಬೇತುದಾರರ ಮಾರ್ಗದರ್ಶನ ಪಡೆದಾಗ ಹೆಚ್ಚಿನ ಸಾಧನೆ ಮಾಡಲು ಸಾಧ್ಯ ಎನ್ನುತ್ತಾರೆ.

ನಾನು ಕುಸ್ತಿ ಮಾಡುವ ಸಂದರ್ಭದಲ್ಲಿ ಗದಗಿನ ಪ್ರೇಮ ಹುಚ್ಚಣ್ಣನವರು ಸಾಕಷ್ಟು ಹೆಸರನ್ನು ಪಡೆದಿದ್ದರು ಅವರ ಎದುರು ಸ್ಪರ್ಧಿಸಿದ್ದೇ ನನ್ನ ಶ್ರೇಷ್ಠ ಸ್ಪರ್ಧೆ ಅವರಂತೆ ಏನಾದರೂ ಸಾಧಿಸಬೇಕೆಂಬ ಛಲದಿಂದ ಕುಸ್ತಿ ಮುಂದುವರಿಸಿದೆ ಮುಂದಿನ ದಿನಗಳಲ್ಲಿ ಸುಶೀಲ್ ಕುಮಾರ್ ಮತ್ತು ಯೋಗೇಶ್ವರ್ ದತ್ ಇವರ ಶೈಲಿಯನ್ನು ಅನುಸರಿಸಿ ಇವರಂತೆ ಸಾಕಷ್ಟು ಸಾಧನೆ ಮಾಡಬೇಕೆಂಬ ಆಸೆ ಹೊತ್ತಿದ್ದರೂ ಸಹ ಕೆಲವು ಕಾರಣದಿಂದ ಕುಸ್ತಿಯಲ್ಲಿ ಉಳಿಯಲು ಸಾಧ್ಯವಾಗಲಿಲ್ಲ ಆದರೆ ಧೃತಿಗೆಟ್ಟಿಲ್ಲ ಮುಂದಿನ ದಿನಗಳಲ್ಲಿ ನನ್ನ ತರಬೇತಿಯಲ್ಲಿ ಒಲಂಪಿಕ್ಸ್ ಸಾಧನೆ ಮಾಡುವಂತಹ ಕ್ರೀಡಾಪಟುಗಳನ್ನು ತರಬೇತಿಗೊಳಿಸುತ್ತೇನೆ ಎಂಬ ವಿಶ್ವಾಸ ಉಳಿಸಿ ಕೊಂಡಿದ್ದಾರೆ ಮಮತಾ ಮಾರುತಿ ಕೆಲೋಜಿ ಯವರು.

ಈ ಮಹಿಳಾಮಣಿಯ ಸಾಧನೆ ಕಡಿಮೆಯೇನಲ್ಲ, ತನ್ನ ಕೈಲಾದಷ್ಟು ವಯಕ್ತಿಕ ಸಾಧನೆಯನ್ನು ಮಾಡಿ ತನ್ನಿಂದ ತಲುಪಲಾಗದ ಮಟ್ಟಗಳನ್ನು ತನ್ನ ಶಿಷ್ಯರಿಂದ ಮಾಡಿಸಲು ತಮ್ಮ ಸಮಯವನ್ನು ಮುಡುಪಾಗಿಟ್ಟಿರುವ ಈ ಸಾಧಕಿ ಮಾದರಿಯಾಗಿದ್ದಾಳೆ.

# ಶಬರಿಯಂತೆ ಕಾದರೂ ಪ್ರಯೋಜನವಿಲ್ಲ: ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ನಮ್ಮ ರಾಜ್ಯಕ್ಕೆ ನಿರಂತರವಾಗಿ ಆಗುತ್ತಿರುವ ಅನ್ಯಾಯ, ತಾರತಮ್ಯ, ಮಲತಾಯಿ ಧೋರಣೆ ವಿರೋಧಿಸಿ ರಾಜ್ಯದ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಫೆಬ್ರವರಿ 07 ರಂದು ನವದೆಹಲಿಯ ಜಂತರ್ ಮಂತರ್ ನಲ್ಲಿ ಬೆಳಿಗ್ಗೆ 11.00 ಗಂಟೆಗೆ ಪ್ರತಿಭಟನೆ ಹಮ್ಮಿಕೊಳ್ಳಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸೋಮವಾರ ಕರೆದಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು.

ರಾಜ್ಯದ ಜನತೆ ನಮಗೆ ಕೊಟ್ಟ ಅವಕಾಶಕ್ಕೆ ನ್ಯಾಯ ಒದಗಿಸಬೇಕಾದುದ್ದು ನಮ್ಮ ಕರ್ತವ್ಯ. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರ ನ್ಯಾಯ ಒದಗಿಸಿಕೊಡಲಿದೆ ಎಂದು ಇಲ್ಲಿಯವರೆಗೂ ತಾಳ್ಮೆ ಯಿಂದ ಕಾಯುತ್ತಿದ್ದೆವು. ಕಳೆದ ಸಾಲಿನ ಬಜೆಟ್ ನಲ್ಲಿ ಹೇಳಿದಂತೆ ನಡೆದುಕೊಳ್ಳುತ್ತಾರೆ ಎಂದು ಕಾದಿದ್ದೆವು. ಆದರೆ ಇದುವರೆಗೂ ಅನ್ಯಾಯ ಸರಿ ಪಡಿಸಿಲ್ಲ. ಇದರ ವಿರುದ್ಧ ಧ್ವನಿ ಎತ್ತಲೇಬೇಕಾಗಿದೆ. ಹೋರಾಟಕ್ಕೆ ಜೊತೆ ನೀಡಲು ಇಡೀ ಸರ್ಕಾರ ಪಕ್ಷ ಭೇದ ಮರೆತು ಆಹ್ವಾನ ನೀಡಿದ್ದೇವೆ. ಕನ್ನಡಿಗರಿಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕಿದೆ. ಕೇಂದ್ರದ ಕಿವಿಯನ್ನು ತೆರೆಸಲು ಹೋರಾಡುತ್ತಿದ್ದೇವೆ ಎಂದರು.

ರಾಜ್ಯಕ್ಕೆ ನಿರಂತರ ಅನ್ಯಾಯ

ಭದ್ರಾ ಯೋಜನೆಗೆ 5300 ಕೋಟಿ ಕೊಡುತ್ತೇವೆ ಎಂದು ಕಳೆದ ಸಾಲಿನ ಬಜೆಟ್ ನಲ್ಲಿ ಘೋಷಣೆ ಮಾಡಿ ಈವರಗೆ ಒಂದು ರೂ. ಕೂಡ ಬಿಡುಗಡೆ ಮಾಡಿಲ್ಲ. ಬರಗಾಲ ಪರಿಹಾರದ ಹಣವೂ ಇಲ್ಲ. 150 ಮಾನವ ದಿನಗಳಿಗೆ ಕೂಲಿ ಕೊಡಲು ಕೂಡ ಅನುಮತಿ ನೀಡಿಲ್ಲ ಎಂದರು. ಇಂಥ ಹಲವು ಕಾರಣಗಳಿಗಾಗಿ ಅನಿವಾರ್ಯವಾಗಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ದೇಶದ ಜನರ ಗಮನ ಸೆಳೆಯಬೇಕು, ಕೇಂದ್ರ ಸರ್ಕಾರದ ಮಲತಾಯಿ ಧೋರಣೆ ಬಗ್ಗೆ, ಹಣಕಾಸು ಹಂಚಿಕೆಯಲ್ಲಾಗಿರುವ ತಾರತಮ್ಯ, ಬರಗಾಲದ ತೋರಿರುವ ಮಲತಾಯಿ ಧೋರಣೆ ಬಗ್ಗೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಎಲ್ಲಾ ಶಾಸಕರು, ಮೇಲ್ಮನೆ ಶಾಸಕರು ಭಾಗವಹಿಸುತ್ತಿದ್ದಾರೆ ಎಂದರು.

ತೆರಿಗೆ ಪಾಲಿನಲ್ಲಿ ರಾಜ್ಯಕ್ಕೆ ನಷ್ಟ:

ಒಕ್ಕೂಟ ವ್ಯವಸ್ಥೆಯಲ್ಲಿ ಸಂವಿಧಾನದ ಮೂಲಕ ಕೇಂದ್ರ ಮತ್ತು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳು ಸೇರಿ ಜನರ ಸೇವೆಯನ್ನು ಮಾಡಲು ಒಪ್ಪಿಕೊಂಡಿದ್ದೇವೆ. ಕೇಂದ್ರ ಸರ್ಕಾರದ ತೆರಿಗೆ ಹಣವೆಂದರೆ ರಾಜ್ಯಗಳಿಂದ ಬರುವ ತೆರಿಗೆ ಹಣ , ಸೆಸ್, ಪೆಟ್ರೋಲ್ ಡೀಸೆಲ್, ಸರ್ಚಾರ್ಜ್. ಇವುಗಳಿಂದ ಸಂಗ್ರಹ ವಾಗುವ ಹಣವನ್ನು ಕೇಂದ್ರ ಮತ್ತು ರಾಜ್ಯಗಳಿಗೆ ಹಂಚಿಕೆಯಾಗಬೇಕೆಂದು ಹಣಕಾಸು ಆಯೋಗ ರಚನೆಯಾಗಿದೆ. ಸಂವಿಧಾನದ 7 ನೇ ಪರಿಚ್ಛೇಧ ಅದನ್ನು ಸ್ವತಂತ್ರ ಸಂಸ್ಥೆಯಾಗಿಸಿದೆ. ಇಲ್ಲಿಯವರೆಗೆ 15 ಹಣಕಾಸು ಆಯೋಗಗಳು ಆಗಿವೆ. ಪ್ರಸ್ತುತ 16 ನೇ ಹಣಕಾಸು ಆಯೋಗ ರಚನೆಯಾಗಿದ್ದು, ಅಧ್ಯಕ್ಷರ ನೇಮಕವಾಗಿದೆ.

14 ನೇ ಹಣಕಾಸು ಆಯೋಗದಲ್ಲಿ ರಾಜ್ಯದ ತೆರಿಗೆಯ ಪಾಲು ಶೇ 4.71% ಇದ್ದದ್ದು, 15 ನೇ ಹಣಕಾಸು ಆಯೋಗದಲ್ಲಿ 3.64% ಗೆ ಇಳಿಕೆಯಾಯಿತು. ಅಂದರೆ ಶೇ 1.07% ಕಡಿಮೆಯಾಗಿದೆ. ಅದರಿಂದ 4 ವರ್ಷಗಳಲ್ಲಿ 45,000 ಕೋಟಿ ರೂ. ರಾಜ್ಯಕ್ಕೆ ಕಡಿತ ಆಯಿತು. ಇದು ಕೇವಲ ನಗದು ಹಂಚಿಕೆಯೊಂದರಲ್ಲೇ ಆಗಿರುವ ಅನ್ಯಾಯ. ಅಂದಾಜಿನ ಪ್ರಕಾರ ಈ ವರ್ಷ ನಮ್ಮ ರಾಜ್ಯಕ್ಕೆ ನಗದು ಹಂಚಿಕೆಯಲ್ಲಿ 62098 ಕೋಟಿ ರೂ.ಗಳು ಕರ್ನಾಟಕಕ್ಕೆಕಡಿಮೆಯಾಗಲಿದೆಎಂದುಮುಖ್ಯಮಂತ್ರಿಗಳು ವಿವರಿಸಿದರು.

ರಾಜ್ಯಕ್ಕೆ 73,593 ಕೋಟಿ ರೂ.ಗಳು ತೆರಿಗೆ ಪಾಲು ಕಡಿಮೆ

ಹಣಕಾಸು ಆಯೋಗ ನಗದು ಹಂಚಿಕೆ ಮಾಡುವಾಗ ಶೇ 4.71 ರಿಂದ ಶೇ 3.74 ಕ್ಕೆ ಇಳಿಕೆ ಮಾಡಿದ್ದರಿಂದ ರಾಜ್ಯಕ್ಕೆ ಆಗಿರುವ ಅನ್ಯಾಯ ಸರಿಪಡಿಸಲು 5495 ಕೋಟಿ ರೂ.ಗಳ ವಿಶೇಷ ಅನುದಾನ ನೀಡಲು ಶಿಫಾರಸ್ಸು ಮಾಡಲಾಗಿತ್ತು. ಮಧ್ಯಂತರ ಬಜೆಟ್ ನಲ್ಲಿ ಈ ಬಗ್ಗೆ ಶಿಫಾರಸ್ಸು ಮಾಡಿದರು. ಈ ಹಣವೂ ರಾಜ್ಯಕ್ಕೆ ಬರಲಿಲ್ಲ.

ಈ ಮೊತ್ತವನ್ನು ಕೇಂದ್ರ ಸರ್ಕಾರವನ್ನು ಕೇಳಿ ಪಡೆಯಲು ವಿಧಾನಸಭೆಯಲ್ಲಿ ವಿಷಯ ಮಂಡಿಸಿದ್ದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇದನ್ನು ತಿರಸ್ಕರಿಸಿದರು. ಅಂತಿಮ ವರದಿಯಲ್ಲಿ 3000 ಕೋಟಿ ರೂ. ಫೆರಿಫೆರಲ್ ರಿಂಗ್ ರೋಡಿಗೆ, ಕೆರೆಗಳನ್ನು ಅಭಿವೃದ್ಧಿ ಪಡಿಸಲು 3000 ಸೇರಿ 6000 ಕೋಟಿ ರೂ. ಗಳನ್ನು ಹೆಚ್ಚುವರಿಯಾಗಿ ಕೊಡಲು ಶಿಫಾರಸು ಮಾಡಲಾಯಿತು. ಈ ಹಣವೂ ಬರಲಿಲ್ಲ.

ಮೋದಿ ಅವರು ಪ್ರಧಾನಿ ಆದ ಬಳಿಕ 2020–21 ರಿಂದ 2025–26 ರವೆಗಿನ ಅವಧಿಗೆ ರಚನೆಯಾದ 15 ನೇ ಹಣಕಾಸು ಆಯೋಗದ ತೆರಿಗೆ ಪಾಲು ಹಂಚಿಕೆಯಲ್ಲಿ 62,098 ಕೋಟಿ ರೂ.ಗಳಷ್ಟು ರಾಜ್ಯಕ್ಕೆ ನಷ್ಟವಾಗಿದೆ ಎಂದರು.

GST ನಲ್ಲಿ ರಾಜ್ಯಕ್ಕೆ ಅನ್ಯಾಯ

GST ಜಾರಿಗೆ ಬಂದಾಗ ಇದು ಅವೈಜ್ಞಾನಿಕ ಎಂದು ನಾವು ಸಾರಿ ಸಾರಿ ಹೇಳಿದೆವು. ಆಗ ರಾಜ್ಯದ ತೆರಿಗೆ ಬೆಳವಣಿಗೆ ದರ 15% ಇತ್ತು. ಇದರಿಂದ ತೆರಿಗೆ, ಕೇಂದ್ರದ ಅನುದಾನವೂ ಹೆಚ್ಚಾಗುತ್ತೆ ಎಂದು ಕೇಂದ್ರ ಸರ್ಕಾರ ಹೇಳಿತ್ತು. ಆದರೆ ಅದನ್ನೂ ಪರಿಹಾರ ರೂಪದಲ್ಲಿ ರಾಜ್ಯಕ್ಕೆ ತುಂಬಿ ಕೊಡುವುದಾಗಿ ಕೇಂದ್ರ ಹೇಳಿತ್ತು. ಈ ಪರಿಹಾರ ಜೂನ್ 2022 ಕ್ಕೆ ನಿಲ್ಲಿಸಿದ್ದಾರೆ. ಈಗ ಪರಿಹಾರ ಕೊಡ್ತಾ ಇಲ್ಲ. 5 ವರ್ಷಗಳ ಕಾಲ ಮಾತ್ರ ಪರಿಹಾರ ಕೊಟ್ಟರು. ಇದರಿಂದಾಗಿ ಈಗ ನಮ್ಮ ತೆರಿಗೆ ಬೆಳವಣಿಗೆ 15% ಗೆ ಮತ್ತೆ ತಲುಪಲು ಆಗಲೇ ಇಲ್ಲ. ಹೀಗಾಗಿ ಪರಿಹಾರ ಮುಂದುವರೆಸಿ ಎಂದು ಕೇಳಿದೆವು. ಇವತ್ತಿನವರೆಗೂ ಮುಂದುವರೆಸುವ ಬಗ್ಗೆ ತೀರ್ಮಾನವನ್ನೇ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿ, ಈಗಲೂ ನಮಗೆ , ನಮ್ಮ ರಾಜ್ಯಕ್ಕೆ GST ನಲ್ಲಿ ಅನ್ಯಾಯ ಆಗುತ್ತಲೇ ಇದೆ ಎಂದರು.

ರಾಜ್ಯದಿಂದ ನಾವು ಕೊಡುವ 100 ರೂ. ಗಳಲ್ಲಿ 12 ರೂ. ಮಾತ್ರ ನಮಗೆ ವಾಪಾಸ್ ಬರತ್ತೆ. ಉಳಿದದ್ದೆಲ್ಲಾ ಅವರೇ ಇಟ್ಕೊತಾರೆ ರಾಜ್ಯದಿಂದ ಪ್ರತಿ ವರ್ಷ ಕೇಂದ್ರಕ್ಕೆ 4, 30,000 ಕೋಟಿ ತೆರಿಗೆ ವಸೂಲಿ ಆಗಿ ಹೋಗುತ್ತಿದೆ. ತೆರಿಗೆ ಸಂಗ್ರಹಣೆಯಲ್ಲಿ ಮಹಾರಾಷ್ಟ್ರ ಬಿಟ್ಟರೆ ನಮ್ಮ ರಾಜ್ಯ ಎರಡನೇ ಸ್ಥಾನದಲ್ಲಿದೆ. ನಮಗೆ ಈ ವರ್ಷ ತೆರಿಗೆ ಪಾಲಿನಲ್ಲಿ 37, 252 ಕೋಟಿ ಬರುವುದು. ಕೇಂದ್ರ ಪುರಸ್ಕೃತ ಯೋಜನೆಯಲ್ಲಿ 13,005 ಕೋಟಿ ಎರಡೂ ಸೇರಿ ಕೇವಲ 50,257 ಕೋಟಿ ರಾಜ್ಯಕ್ಕೆ ಬಂದಿದೆ. ರಾಜ್ಯಕ್ಕೆ ಇದು ಭೀಕರ ಅನ್ಯಾಯ ಅಲ್ಲವೇ ಎಂದು ಪ್ರಶ್ನಿಸಿದರು.

ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ಕೊಡುತ್ತೇವೆ ಎಂದು ತಿಳಿಸಿದ್ದರು. ಬಸವರಾಜ ಬೊಮ್ಮಾಯಿ ಅವರು ರಾಜ್ಯ ಬಜೆಟ್ ಮಂಡಿಸುವಾಗ ಇದನ್ನೇ ಪುನಃ ನೀರಾವರಿ ಯೋಜನೆಯ ಅನುದಾನ ಎಂದು ಉಲ್ಲೇಖಿಸಿದ್ದರು. 2.5 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರು ಒದಗಿಸುವ ಯೋಜನೆ ಇದು. ಆದರೆ ಇದುವರೆಗೂ ಒಂದೇ ಒಂದು ರೂ.ಬಂದಿಲ್ಲ . ಈಗಲಾದರೂ ಬಿಡುಗಡೆ ಮಾಡಿ ಎಂದು ನಾನು ಒತ್ತಾಯಿಸುತ್ತೇನೆ ಎಂದರು.

ಮಹದಾಯಿ ಯೋಜನೆಯ ಪರಿಸರ ತೀರುವಳಿ ಇಂದಿನವರೆಗೆ ಆಗಿಲ್ಲ. ಯೋಜನೆ ಪ್ರಾರಂಭಿಸಲು ತೀರುವಳಿ ಕೊಡಿ ಎಂದರೆ ಕೊಟ್ಟಿಲ್ಲ. ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಣೆ ಮಾಡಿಲ್ಲ. ಇಂದಿನವರೆಗೆ ಗೆಜೆಟ್ ನೋಟಿಫಿಕೇಶನ್ ಮಾಡಿಕೊಟ್ಟಿಲ್ಲ ಎಂದರು. ಬೆಂಗಳೂರಿಗೆ ಕುಡಿಯುವ ನೀರು ಒದಗಿಸುವ ಮೇಕೆದಾಟು ಇವತ್ತಿನವರೆಗೂ ಅನುಮತಿ ಕೊಟ್ಟಿಲ್ಲ. 236 ತಾಲ್ಲೂಕುಗಳಲ್ಲಿ 223 ತಾಲ್ಲೂಕುಗಳು ಬರಗಾಲ ಪೀಡಿತವಾಗಿದೆ. 123 ತೀವ್ರ ಬರಗಾಲ ಪೀಡಿತವಾಗಿದ್ದರೂ ಕೇಂದ್ರದಿಂದ ನಯಾಪೈಸೆ ಬಂದಿಲ್ಲ ಎಂದರು.

ಶಬರಿಯಂತೆ ಕಾದರೂ ಪ್ರಯೋಜನವಿಲ್ಲ

ಸೆಪ್ಟೆಂಬರ್ 23 ರಂದು ಕೇಂದ್ರ ತಂಡ ಬಂದು ಬರಗಾಲ ಅಧ್ಯಯನ ಮಾಡಿ ಕೇಂದ್ರಕ್ಕೆ ವರದಿ ಕೊಟ್ಟಿದೆ. ಬಳಿಕ ಶಬರಿ ಕಾದಂತೆ ನಮ್ಮ ಮಂತ್ರಿಗಳು ಭೇಟಿಗೆ ಕಾದು ವಾಪಾಸ್ ಬಂದಿದ್ದಾರೆ. ಭೇಟಿ ಮಾಡಿದಾಗ ಸಭೆ ಕರೆಯುತ್ತೇನೆ ಎಂದ ಅಮಿತ್ ಶಾ ಇವತ್ತಿನವರೆಗೂ ಸಭೆಯನ್ನೇ ಕರೆದಿಲ್ಲ. ಸಭೆ ಕರೆಯದೆ ಬರ ಪರಿಹಾರ ಬರುವುದೇ ಇಲ್ಲ. ಇವರು ಸಭೆ ಕರೆದೇ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಗೆ ಪ್ರತಿಪಕ್ಷದವರಿಗೂ ಕರೆ

ಬಿಜೆಪಿ ಶಾಸಕರು, ಸಂಸದರು, ನಾಯಕರಿಗೂ ನಾವು ಪ್ರತಿಭಟನೆಗೆ ಕರೆ ಕೊಡುತ್ತಿದ್ದೇವೆ. ನಾವು ಬಿಜೆಪಿ ವಿರುದ್ಧ ಪ್ರತಿಭಟನೆ ಮಾಡುತ್ತಿಲ್ಲ. ರಾಜ್ಯದ ಪರವಾಗಿ ಪ್ರತಿಭಟಿಸುತ್ತಿದ್ದೇವೆ. ನೀವೂ ರಾಜ್ಯದ ಜನರ ಧ್ವನಿಯಾಗಿ, ರಾಜ್ಯದ ಜನರ ಪರವಾಗಿ ನಿಲ್ಲಿ ಎಂದು ಬಿಜೆಪಿ ಯವರಿಗೆ ಕರೆ ಕೊಡುತ್ತೇವೆ. ಕನ್ನಡಿಗರಿಗೆ ದ್ರೋಹ ಮಾಡಬೇಡಿ , ಬನ್ನಿ ರಾಜ್ಯದ ಪರವಾಗಿ ಧ್ವನಿ ಎತ್ತೋಣ ಎಂದು ಕರೆಯುತ್ತಿದ್ದೇವೆ. ಪ್ರತಿಭಟಿಸದಿದ್ದರೆ ಕನ್ನಡಿಗರಿಗೆ ದ್ರೋಹ ಉಂಟಾಗಲಿದೆ ಎಂದರು

ಡಿ.ಕೆ.ಶಿವಕುಮಾರ್, ಮುಖ್ಯ ಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಆರ್ಥಿಕ ಇಲಾಖೆ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್ ಅವರು ಉಪಸ್ಥಿತರಿದ್ದರು.

# ಕಡ್ಡಿರಾಂಪುರ ವಿದ್ಯಾರ್ಥಿಗಳಿಂದ ಹಂಪಿ ಉತ್ಸವದಲ್ಲಿ ಯೋಗ ನೃತ್ಯ



**ಹಂಪಿ ಟೈಮ್ಸ್ ಹೊಸಪೇಟೆ**

ವಿರುಪಾಕ್ಷೇಶ್ವರ ದೇವಸ್ಥಾನ ವೇದಿಕೆಯಲ್ಲಿ ಹಂಪಿ ಉತ್ಸವ ಕಾರ್ಯಕ್ರಮದಲ್ಲಿ ಕಡ್ಡಿರಾಂಪುರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ ಅದ್ಭುತ ಯೋಗ ನೃತ್ಯ ಪ್ರದರ್ಶನ ಮಾಡಿದರು.

ಕಡ್ಡಿರಾಂಪುರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಈ ಹಿಂದೆ ಹಲವಾರು ಸರ್ಕಾರಿ ಕಾರ್ಯಕ್ರಮಗಳು, ಖಾಸಗಿ ವೇದಿಕೆ ಹಾಗೂ ಮುಂತಾದ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಪ್ರಶಸ್ತಿ ಪತ್ರದೊಂದಿಗೆ ಮೆಚ್ಚುಗೆಯನ್ನು ಸಹ ಪಡೆದಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಪ್ರಥಮ ಸ್ಥಾನ, ಹಂಪಿಯಲ್ಲಿ ರಾಜ್ಯ ಮುಕ್ತ ಯೋಗಾಸನ ಸ್ಪರ್ಧೆಯಲ್ಲಿ ದ್ವಿತೀಯ ಹಾಗೂ ತೃತೀಯ ಪ್ರಶಸ್ತಿಗಳನ್ನು ಪಡೆದುಕೊಂಡು ಯಶಸ್ವಿಯಾಗಿದ್ದಾರೆ.

ಸುಮಾರು ಹತ್ತಾರು ಕಾರ್ಯಕ್ರಮಗಳನ್ನು ಒಳಗೊಂಡಂತೆ ವಿಜಯನಗರ ಟ್ಯಾಲೆಂಟ್ ಹಬ್ ಕಾರ್ಯಕ್ರಮದಲ್ಲಿ ಮೊದಲಿಗರಾಗಿ ಹೊರಹೊಮ್ಮಿ ಎಲ್ಲರ ಮನಸ್ಸು ಗೆದ್ದು, ಆಕರ್ಷಕವಾದ ಯೋಗ ಪ್ರದರ್ಶನ ಮಾಡುವಲ್ಲಿ ಕಾರಣೀಭೂತರಾಗಿದ್ದಾರೆ.

ಯೋಗ ಪ್ರದರ್ಶನ ಮಾಡಲು ಅವಕಾಶ ನೀಡಿದಂತ ಜಿಲ್ಲಾಡಳಿತ ಹಾಗೂ ಹಂಪಿ ಉತ್ಸವದ ರೂವಾರಿಗಳಿಗೆ ಕಡ್ಡಿರಾಂಪುರದ ಕನಕಶ್ರೀ ಯೋಗ ಕಲಾ ಸಾಂಸ್ಕೃತಿಕ ಸಂಘ ಹಾಗೂ "ಯಶಸ್ವಿ ಪ್ರದರ್ಶನ" ನೀಡಿದ ಕಡ್ಡಿರಾಂಪುರದ ಯೋಗ ಮಕ್ಕಳಿಗು ಅಭಿನಂದಿಸಿದ್ದಾರೆ.

ಕಾರ್ಯಕ್ರಮದಲ್ಲಿ ಕನಕಶ್ರೀ ಯೋಗ ಕಲಾ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷರಾದ ಪ್ರಶಾಂತ್ ಕಡ್ಡಿರಾಂಪುರ್, ಮಂಜುನಾಥ ಮತ್ತು ಕಡ್ಡಿರಾಂಪುರ ಮಕ್ಕಳ ವೃಂದ, ಸಾರ್ವಜನಿಕರು ಉಪಸ್ಥಿತರಿದ್ದರು.

# ಬದಲಾದ ಆಹಾರಕ್ರಮ, ಜೀವನಶೈಲಿ ಮಾರಕ ಖಾಯಿಲೆಗಳು ಉಲ್ಬಣ



**ಹಂಪಿ ಟೈಮ್ಸ್ ಕೊಪ್ಪಳ:**

ಆಹಾರ ಕ್ರಮದಲ್ಲಿನ ಬದಲಾವಣೆ ಹಾಗೂ ದೈಹಿಕ ಚಟುವಟಿಕೆ ಇಲ್ಲದ ಜೀವನಶೈಲಿ ಮಾರಕ ಖಾಯಿಲೆಗಳಿಗೆ ಕಾರಣವಾಗುತ್ತಿವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಲಿಂಗರಾಜು ಟಿ. ಅವರು ಹೇಳಿದರು.

ಸೋಮವಾರದಂದು ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ಎನ್.ಸಿ.ಡಿ. ಕೋಶ ಕೊಪ್ಪಳ ಇವರ ಸಂಯುಕ್ತ ಆಶ್ರಯದಲ್ಲಿ ಹಳೇ ಜಿಲ್ಲಾಸ್ಪತ್ರೆ ಆವರಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ "ವಿಶ್ವ ಕ್ಯಾನ್ಸರ್ ದಿನಾಚರಣೆಯ" ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿ ವರ್ಷ ಫೆಬ್ರವರಿ 04 ರಂದು ವಿಶ್ವ ಕ್ಯಾನ್ಸರ್ ದಿನಾಚರಣೆಯ ನಿಯಂತ್ರಣ ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತದೆ. ಆರೈಕೆಯ ಅಂತರವನ್ನು ಮುಚ್ಚಿ ಎಂಬ ಘೋಷ ವಾಕ್ಯದೊಂದಿಗೆ ಈ ವರ್ಷ ಕಾರ್ಯಕ್ರಮ ಆಚರಿಸಲಾಗುತ್ತಿದೆ. ಕ್ಯಾನ್ಸರ್ ಖಾಯಿಲೆ ನಿಯಂತ್ರಣದ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ಸಾವುನೋವುಗಳನ್ನು ತಡೆಗಟ್ಟುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಜೀವನ ಶೈಲಿಯಿಂದ ರೋಗಗಳು ಇಂದಿನ ವೈದ್ಯಲೋಕಕ್ಕೆ ಸವಾಲಾಗಿವೆ. ಮನುಷ್ಯ ಆಧುನಿಕನಾದಂತೆ ಆತನ ಮಾನಸಿಕ ಹಾಗೂ ದೈಹಿಕ ಸ್ವಾಸ್ಥ್ಯಕ್ಕೆ ಹೆಚ್ಚಿನ ತೊಂದರೆಗಳು ಕಾಣಿಸಿಕೊಂಡು, ಆಹಾರಕ್ರಮದಲ್ಲಿನ ಬದಲಾವಣೆ, ದೈಹಿಕ ಚಟುವಟಿಕೆ ಇಲ್ಲದ ಜೀವನಶೈಲಿ ಹಾಗೇ ಮಾನಸಿಕ ಒತ್ತಡದಿಂದಾಗಿ ಅನೇಕ ರೋಗಗಳು ಶಾರೀರಿಕ ಹಾಗೂ ಮಾನಸಿಕವಾಗಿ ದಾಳಿ ಮಾಡುತ್ತವೆ. ಇಂತಹ ಜೀವನಶೈಲಿಯ ರೋಗಗಳಲ್ಲಿ ಕ್ಯಾನ್ಸರ್ ಮೊದಲನೇ ಸ್ಥಾನದಲ್ಲಿದೆ ಎಂದು ಹೇಳಿದರು.

ಮನುಷ್ಯನ ಯಾವುದೇ ಅಂಗಕ್ಕೂ ಬರಬಹುದಾದ ಮಾರಕ ಖಾಯಿಲೆ ಕ್ಯಾನ್ಸರ್. ನಮ್ಮ ದೇಶದಲ್ಲಿ ಪ್ರತಿ ವರ್ಷ 10 ಲಕ್ಷ ಮಂದಿ ಹೊಸದಾಗಿ ಕ್ಯಾನ್ಸರ್ ರೋಗಿಗಳ ಸಾಲಿಗೆ ಸೇರುತ್ತಿದ್ದಾರೆ. ತಂಬಾಕು ಮದ್ಯಪಾನಗಳಿಂದ ದೂರವಿರುವ ಶಿಸ್ತುಬದ್ಧ ಜೀವನ ಶೈಲಿ, ಪೌಷ್ಠಿಕ ಆಹಾರ ಸೇವನೆ, ವೈಯಕ್ತಿಕ ಸ್ವಚ್ಛತೆ, ಒಳ್ಳೆಯ ಆರೋಗ್ಯಕರ ಅಭ್ಯಾಸ, ದೈಹಿಕವಾಗಿ ಸದಾ ಚಟುವಟಿಕೆಯಿಂದ ಇರುವುದು ಹೀಗೆ ಪ್ರತಿನಿತ್ಯದ ನಮ್ಮ ಜೀವನಶೈಲಿಯನ್ನು ಉತ್ತಮವಾಗಿ ರೂಢಿಸಿಕೊಂಡರೆ ಈ ಖಾಯಿಲೆಯನ್ನ ತಡೆಗಟ್ಟಬಹುದು. ಗ್ರಾಮ ಮತ್ತು ನಗರಗಳಲ್ಲಿ ಕೆಲಸ ನಿರ್ವಹಿಸುವ ವೈದ್ಯಾಧಿಕಾರಿಗಳು ಮತ್ತು ಕ್ಷೇತ್ರ ಸಿಬ್ಬಂದಿಗಳು ಈ ಕ್ಯಾನ್ಸರ್ ಖಾಯಿಲೆಯ ನಿಯಂತ್ರಣದ ಬಗ್ಗೆ ಸಮುದಾಯಕ್ಕೆ ಅರಿವು ಮೂಡಿಸಿ ಕ್ಯಾನ್ಸರ್‌ಮುಕ್ತ ಕೊಪ್ಪಳ ಜಿಲ್ಲೆಯಾಗಿ ಮಾಡಲು ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳು ಸತಿಳಿಸಿದರು.

ಜನಜಾಗೃತಿ ಜಾಥಾವು ಹಳೇ ಜಿಲ್ಲಾಸ್ಪತ್ರೆ ಆವರಣದಿಂದ ಅಶೋಕ ಸರ್ಕಲ್, ಜವಾಹರ ರಸ್ತೆ, ದಿವಟರ್ ಸರ್ಕಲ್, ಡಾ॥ಸಿಂಪಿಲಿಂಗಣ್ಣ ರಸ್ತೆ, ಕಾರ್ಮಿಕರ ಸರ್ಕಲ್, ಬಸ್‌ನಿಲ್ದಾಣ ಮಾರ್ಗವಾಗಿ ಸಾರ್ವಜನಿಕರಿಗೆ ಕ್ಯಾನ್ಸರ್ ನಿಯಂತ್ರಣ ಘೋಷಣೆ ಕೂಗುತ್ತ, ಕರಪತ್ರ ಹಂಚುವುದರ ಮೂಲಕ ಮರಳಿ ಹಳೇ ಜಿಲ್ಲಾಸ್ಪತ್ರೆಯ ಆವರಣಕ್ಕೆ ತಲುಪಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ॥ ನಂದಕುಮಾರ್ ಹೆಚ್., ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳಾದ ಡಾ॥ ಪ್ರಕಾಶ ವ್ಹಿ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ॥ ರವೀಂದ್ರನಾಥ ಎಮ್.ಹೆಚ್., ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿಗಳಾದ ಡಾ॥ ಶಶಿಧರ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳಾದ ಡಾ॥ ಪ್ರಕಾಶ ಹೆಚ್., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ॥ ವೆಂಕಟೇಶ, ಕೊಪ್ಪಳ ತಾಲೂಕಾ ಆರೋಗ್ಯ ಅಧಿಕಾರಿಗಳಾದ ಡಾ॥ ರಾಮಾಂಜನೇಯ, ಡಾ॥ ಜಯಶ್ರೀ ಕಮತೆ, ಜಿಲ್ಲಾ ಎನ್.ಸಿ.ಡಿ. ಕಾರ್ಯಕ್ರಮ ಸಂಯೋಜಕರು, ವೈದ್ಯಾಧಿಕಾರಿಗಳು, ಡಾ॥ ಮಹೇಶ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ, ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಲ್.ವ್ಹಿ ಸಜ್ಜನರ್ ಹಾಗೂ ವಿವಿಧ ವೃಂದದ ಅಧಿಕಾರಿಗಳು, ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು, ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.

# ಫೆ.13 ರಂದು ಪಿಂಚಣಿ ಅದಾಲತ್

**ಹಂಪಿ ಟೈಮ್ಸ್ ಬಳ್ಳಾರಿ**

ಕಾರ್ಮಿಕರ ಭವಿಷ್ಯ ನಿಧಿ ಪ್ರಾದೇಶಿಕ ಕಚೇರಿ ಬಳ್ಳಾರಿ ಇವರ ವತಿಯಿಂದ ಪಿಂಚಣಿದಾರರ ಕುಂದುಕೊರತೆಗಳನ್ನು ನಿವಾರಿಸಲು ಫೆ.13 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ರವರೆಗೆ ಬಳ್ಳಾರಿ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಏರ್ಪಡಿಸಲಾಗಿದೆ.

ಬಳ್ಳಾರಿ, ಕೊಪ್ಪಳ, ವಿಜಯನಗರ ಮತ್ತು ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳನ್ನು ಬಳ್ಳಾರಿಯ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿ, ಇವರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ತಮ್ಮ ಪಿ.ಪಿ.ಒ ಸಂಖ್ಯೆ ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ, ಕುಂದು ಕೊರತೆಯ ಸ್ವರೂಪ ಇತ್ಯಾದಿಗಳನ್ನು ಬರೆದು ಪತ್ರ ಮೂಲಕ ಫೆ.10 ರೊಳಗೆ ಕಳುಹಿಸಬಹುದು. ಪತ್ರ, ಲಕೋಟೆಯ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು. ಹೆಚ್ಚಿನ ಮಾಹಿತಿಗಾಗಿ ದೂ.08392-268943 ಗೆ ಸಂಪರ್ಕಿಸಬಹುದು ಎಂದು ಕ್ಷೇತ್ರಿಯ ಭವಿಷ್ಯನಿಧಿ ಆಯುಕ್ತ ಕೆ. ವೆಂಕಟ ಸುಬ್ಬಯ್ಯ ತಿಳಿಸಿದ್ದಾರೆ.

## ಕವಿ ಮನಸು

### ವಿಜಯನಗರ



ವಿಜಯನಗರ ಸಾಮ್ರಾಜ್ಯ ಸ್ಥಾಪಕರು ಹಕ್ಕ-ಬುಕ್ಕರು,
ದಾರಿ ತೋರಿದರೂ ವಿದ್ಯಾರಣ್ಯರು,
ವೈಭವದಿ ಆಳಿದರು ಕೃಷ್ಣದೇವರಾಯರು,
ಕವಿಗಳಿದ್ದರು ಅಷ್ಟದಿಗ್ಗಜರು,..

ಸಂಗಮ ಸಾಳುವ ತುಳು ಅರಬೀಡು,
ಪರಂಪರೆಯವರಾಳಿದ ನಾಡು,
ಮನಮೋಹಕ ವಾಸ್ತುಶಿಲ್ಪದ ನಾಡು,
ಸುಂದರ ಪ್ರಕೃತಿಯ ಮಡಿಲಲ್ಲಿ
ತುಂಗಾಭದ್ರದ ದಡದಲ್ಲಿ
ರಮಣೀಯ ನಿಸರ್ಗದ ಬಿಡು,
ಬಂದು ನೀ ಒಮ್ಮೆ ನೋಡು,...

ಪೀಳಿಗೆಯಿಂದ ಪೀಳಿಗೆಗೆ
ತಿಳಿಸುತ್ತವೆ ಬರಹದ ಹೂರಣ,
ಕೃಷ್ಣದೇವರಾಯ ರಚನೆಯ ಜಾಂಬವತಿ ಕಲ್ಯಾಣ,
ಮನ ಚರಿತಂ ರಚಿಸಿದರು ಪೆದ್ದಣ್ಣ,
ಪಾರಿಜಾತಾಪಹರಣ ರಚಿಸಿದರು ತಿಮ್ಮಣ್ಣ,
ನೀ ಎಷ್ಟು ಓದಿದರೂ ತಿಳಿಯುವುದು ತುಂಬಾ ಇಹುದಣ್ಣ,

ಮಣಿ ಮಾಣಿಕ್ಯ ವಜ್ರ ವಸ್ತ್ರಗಳು,
ಸುಂದರ ವಾಸ್ತುಶಿಲ್ಪಗಳು,
ಅಂದದ ಕೆತ್ತನೆಯ ಕಲ್ಲುಗಳು,
ಚಂದದ ರಮಣೀಯ ಸ್ಮಾರಕಗಳು,
ಗತಕಾಲದ ವೈಭವಕ್ಕೆ ಮೂಕ ಸಾಕ್ಷಿಗಳು,
ನೋಡಲು ಸಾಲದು ಎರಡು ಅಕ್ಷಿಗಳು,

ಸ್ವರ ಚಿಮ್ಮಿಸುವ ಕಲಾತ್ಮಕತೆ,
ವಿಜಯನಗರ ಶಿಲ್ಪಗಳ ಚಾತುರ್ಯತೆ
ಇವತ್ತು ಇತಿಹಾಸವಿದ್ದು ಸ್ಮೃತಿ
ಗೊಂಡಿರುವುದು,
ಭವ್ಯವಾದ ಭವಿಷ್ಯವನ್ನು ನಿರ್ಮಿಸುತ್ತಾ,
ನವಭಾರತ ಕಣ್ಣಮುಂದೆ
ಹೊಸ ನೋಟವೊಂದನ್ನು ತೆರೆಯೋಣ.

**– ರೂಪಾದೇವಿ. ವೈ.** ಶಿಕ್ಷಕಿ.
ರಾಮನಗರ ಜಿಲ್ಲೆ

### ಭರತನಾಟ್ಯ



ನಾಟ್ಯ ಆತ್ಮ ಸಾಕ್ಷಾತ್ಕಾರ ಸಾಧಿಸುವ ಪ್ರಯತ್ನ,
ಇದು ಭರತಮುನಿಗಳು ನಮಗೆ ನೀಡಿದ ಅಮೂಲ್ಯ ರತ್ನ.
ಶಿವನ ಗಾಂಭೀರ್ಯ ಉಂಟು,ಶಿವೆಯ ಲಾಸ್ಯ ಉಂಟು,
ಜೊತೆಗೆ ಶಾಸ್ತ್ರೀಯ ಸಂಗೀತದ ರಾಗ ತಾಳದ ನಂಟು.
ಅಮೃತದಷ್ಟೇ ನಿಜ ಮಾತೃ ವಾತ್ಸಲ್ಯ,
ಗುರು ಶಿಷ್ಯರ ಅದ್ಭುತ ಬಾಂಧವ್ಯ.
ನೋಡುಗರ ಕಣ್ಣುಗಳಿಗೆ ಅಂತರಂಗದ ಸಂತೃಪ್ತಿ.
ನಾಟ್ಯ ಕಲಾವಿದರಿಗೆ ಅದುವೇ ಅಲ್ಲವೇ ಆತ್ಮತೃಪ್ತಿ.
ಇದು ಬರೀ ನೃತ್ಯ ಪ್ರದರ್ಶನವಲ್ಲ
ನಮ್ಮ ಸಂಸ್ಕೃತಿಯ ಸತ್ಯದರ್ಶನ.

**– ಮಂಜುಶ್ರೀ ಮುರಳೀಧರ್.**
ತೋರಣಗಲ್ಲು, ಬಳ್ಳಾರಿ.

### ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

**– ಜಾಹೀರಾತು ವ್ಯವಸ್ಥಾಪಕರು.**

# ಮಕ್ಕಳ ಮೇಲಿನ ದೌರ್ಜನ್ಯ ತಡೆಗೆ ಎಲ್ಲರೂ ಕೈಜೋಡಿಸಿ

## ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಅವಿನಾಶ ಕರೆ



**ಹಂಪಿ ಟೈಮ್ಸ್ ಹೊಸಪೇಟೆ**

ಮಕ್ಕಳ ಹಕ್ಕುಗಳನ್ನು ರಕ್ಷಣೆ ಮತ್ತು ಶಿಕ್ಷಣ ಕೊಡಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಜಿಲ್ಲಾ ಅಂಗವಿಕಲ ಕಲ್ಯಾಣಧಿಕಾರಿ ಅವಿನಾಶ ಹೇಳಿದರು.

ನಗರದ ತಾ.ಪಂ ವಿದ್ಯಾರಣ್ಯ ಸಭಾಂಗಣದಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾಡಳಿತ, ಜಿ.ಪಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕಂದಾಯ ಇಲಾಖೆ, ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಚೈತನ್ಯ ಗ್ರಾಮೀಣಾಭಿವೃದ್ಧಿ ಎಜ್ಯುಕೇಷನಲ್ ಟ್ರಸ್ಟ್ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಬಾಲನ್ಯಾಯ ವಿಷಯಗಳಿಗೆ ಜನನ ಮತ್ತು ಮರಣ ನೋಂದಣಿ ಹಾಗೂ ಸರ್ಕಾರಿ ಆಸ್ಪತ್ರೆ ಸಿಬ್ಬಂದಿಗಳಿಗೆ ತರಬೇತಿ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಕ್ಕಳ ಹಕ್ಕುಗಳ ರಕ್ಷಣೆಗೆ ಎಲ್ಲಾ ಇಲಾಖೆಗಳು ಒಂದಾಗಿ ಕೆಲಸ ಮಾಡಬೇಕು. ಸಮಾಜದಲ್ಲಿ ಮೊದಲು ಅರಿವು ಮೂಡಿಸುವ ಕಾರ್ಯ ಆಗಬೇಕು. ಬಾಲ್ಯ ವಿವಾಹ, ದೌರ್ಜನ್ಯ, ಭಿಕ್ಷಾಟನೆ, ಬಾಲ ಕಾರ್ಮಿಕ ಪದ್ಧತಿ ಸೇರಿದಂತೆ ಹಲವು ಆಯಾಮಗಳಲ್ಲಿ ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ತಡೆಯಬೇಕಿದೆ. ಬಾಲ್ಯ ವಿವಾಹವನ್ನುತಡೆಯುವಮಹತ್ತರಕೆಲಸದಲ್ಲಿಸಕ್ರಿಯವಾಗಿತೊಡಗಿಸಿಕೊಂಡಿರುವ ಅಂಗನವಾಡಿ ಕಾರ್ಯಕರ್ತೆಯರ ಕಾರ್ಯ ಶ್ಲಾಘನಿಯ. ಇನ್ನು ಕೆಲವೊಂದು ಕಡೆ ಕಣ್ಣು ತಪ್ಪಿಸಿ ನಡೆಯುತ್ತಿವೆ ಅಂತ ಅಪರಾಧಗಳನ್ನ ತಡೆಯುವಲ್ಲಿ ಇನ್ನೊಷ್ಟು ಸಕ್ರಿಯವಾಗಿ ಕೆಲಸ ಮಾಡಬೇಕಿದೆ ಎಂದರು.

ರಾಜ್ಯ ಮಕ್ಕಳ ಹಕ್ಕುಗಳ ನಿಗಾ ಕೇಂದ್ರದ ಸದಸ್ಯ ರಾಘವೇಂದ್ರ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿ, ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಯಲು ಪೋಕ್ಸೋ ಕಾಯ್ದೆ-2012ಅನ್ನು ಪರಿಣಾಮಕಾರಿಯಾಗಿ ಬಳಕೆ ಮಾಡಬೇಕು. ಜೊತೆಗೆ ಈ ಕಾಯ್ದೆ ಅಂಶಗಳನ್ನು ಪ್ರಚುರಪಡಿಸಬೇಕಿದೆ ಎಂದರು.

ತಾ.ಪಂ ಉಮೇಶ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.ಮುಖ್ಯ ಅತಿಥಿಯಾಗಿ ತಾಲೂಕು ವೈದ್ಯಧಿಕಾರಿ ಡಾ.ಭಾಸ್ಕರ್, ಜಿಲ್ಲಾ ಮಕ್ಕಳ ಘಟಕದ ರಕ್ಷಣಾಧಿಕಾರಿ ಸುಧೀಪ್ ಕುಮಾರ್ ಉಂಕಿ ಪ್ರಾಸ್ತವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಚೈತನ್ಯ ಗ್ರಾಮೀಣ ಅಭಿವೃದ್ಧಿ ಎಜ್ಯುಕೇಷನಲ್ ಟ್ರಸ್ಟ್ ಅಧ್ಯಕ್ಷ ಭೀಮರಾಜ ಯು, ಮಕ್ಕಳ ರಕ್ಷಣಾ ಘಟಕದ ಗಂಗಾಧರ್ ಡಿ, ಶರಣಪ್ಪ, ಶ್ರೀಕಾಂತ, ಲಿಂಗರಾಜ ಸಖಿ ಘಟಕ, ಆಸ್ಪತ್ರೆ ಸಿಬ್ಬಂದಿಗಳು ಭಾಗಿಯಾಗಿದ್ದರು.

# ಭರತ ಹುಣ್ಣಿಮೆ, ಯುಗಾದಿ ಜಾತ್ರೆ ಮೂಲಭೂತ ಸೌಕರ್ಯ ಒದಗಿಸಿ



**ಹಂಪಿ ಟೈಮ್ಸ್ ಹರಪನಹಳ್ಳಿ**

ತಾಲ್ಲೂಕಿನ ಉಚ್ಚಂಗಿದುರ್ಗ ಗ್ರಾಮದ ಶ್ರೀ ಉಚ್ಚಂಗೆಮ್ಮ ಧಾರ್ಮಿಕ ಕ್ಷೇತ್ರದಲ್ಲಿ ನಡೆಯುವ ಫೆಬ್ರವರಿ 22 ರಿಂದ 25 ರ ವರೆಗೆ ಭರತ ಹುಣ್ಣಿಮೆ ನಡೆಯಲಿದೆ. ಈ ಹುಣ್ಣಿಮೆಗೆ ಬೇರೆ ಜಿಲ್ಲೆ ಮತ್ತು ತಾಲೂಕುಗಳಿಂದ ಲಕ್ಷಾಂತರ ಭಕ್ತರು ದೇವಿಯ ದರ್ಶನಕ್ಕೆ ಆಗಮಿಸುವುದರಿಂದ ಮೂಲಭೂತ ಸೌಕರ್ಯ ಒದಗಿಸಬೇಕೆಂದು ಉಪವಿಭಾಗಾಧಿಕಾರಿ ಟಿ.ವಿ.ಪ್ರಕಾಶ್ ಪೂರ್ವಭಾವಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭರತ ಹುಣ್ಣಿಮೆಯಲ್ಲಿ ಮೂಢನಂಬಿಕೆ, ದೇವದಾಸಿ, ಮುತ್ತು ಕಟ್ಟುವ ಪದ್ಧತಿಗಳು ಹಲವು ವರ್ಷಗಳಿಂದ ಸಂಪೂರ್ಣ ನಿಷೇಧಗೊಂಡಿದೆ. ಆದರೂ ಘಟನೆಗಳು ನಡೆಯದಂತೆ ಸಿಸಿ ಟಿವಿ ಅಳವಡಿಸಬೇಕು. ಲಕ್ಷಾಂತರ ಭಕ್ತರು ಸೇರುವುದರಿಂದ ಭಕ್ತರಿಗೆ ಕುಡಿಯುವ ನೀರು, ಶೌಚಾಲಯ, ಬೀದಿ ದೀಪ, ಅಂಬುಲೆನ್ಸ್, ಅಗ್ನಿಶಾಮಕ, ಸಾರಿಗೆ ವ್ಯವಸ್ಥೆ, ಪೊಲೀಸ್ ಬಂದೋಬಸ್ತ್ ವ್ಯವಸ್ಥೆಯನ್ನು ಹೆಚ್ಚುವರಿಯಾಗಿ ಕಲ್ಪಿಸುವಂತೆ ತಿಳಿಸಿದರು.

ಭಕ್ತರಿಗೆ ನೀರಿನ ಪ್ರತ್ಯೇಕ ವ್ಯವಸ್ಥೆ ಮಾಡುವಂತೆ ಗ್ರಾಮಸ್ಥರು ಒತ್ತಾಯಿಸಿದರು. ಖಾಸಗಿ ರೈತರ ಕೊಳವೆ ಬಾವಿ, ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡುವ ಭರವಸೆಯನ್ನು ಅಧಿಕಾರಿಗಳು ನೀಡಿದರು.

ಈ ಸಂದರ್ಭದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಸಹಾಯಕ ಆಯುಕ್ತ ಹೆಚ್. ಗಂಗಾಧರ, ತಹಸೀಲ್ದಾರ್ ಗಿರೀಶ್ ಬಾಬು,ತಾಲ್ಲೂಕು ಕಾರ್ಯ ನಿರ್ವಾಹಕ ಅಧಿಕಾರಿ ಕೆ.ಆರ್. ಪ್ರಕಾಶ್,ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿಲ್ಪಾ ಉಮೇಶ್ ನಾಯ್ಕ್, ಉಪಾಧ್ಯಕ್ಷ ಮಡ್ರಳ್ಳಿ ಕೆಂಚಪ್ಪ,ಪಿಎಸ್ಐ.ಕೆ.ರಂಗಯ್ಯ, ಸಮಿತಿ ಅಧ್ಯಕ್ಷ ಕಟಿಗಿ ಪರುಶುರಾಮಪ್ಪ, ಪಿಡಿಒ. ಪರಮೇಶ್ವರಪ್ಪ, ಕೆ ಎಸ್ ಆರ್ ಟಿ ಸಿ. ಅಧಿಕಾರಿಗಳಾದ ವೆಂಕಟೇಶ್, ಪಕ್ರುದ್ದೀನ್, ಮಂಜಳ, ಎಲ್ಲಾ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಸಾರ್ವಜನಿಕರು ಹಾಜರಿದ್ದರು.






ಮೈಕ್ರೋ ನ್ಯೂಸ್

## ಉಚಿತ ಆರೋಗ್ಯ ಚಿಕಿತ್ಸಾ ಶಿಬಿರ

**ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯೆನಪೋಯ (ಪರಿಗಣಿಸಲ್ಪಟ್ಟ ವಿಶ್ವವಿದ್ಯಾಲಯ) ಮಂಗಳೂರು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ, ಸಿರುಗುಪ್ಪ, ಕಂಪ್ಲಿ, ಕುರುಗೋಡು ಮತ್ತು ಸಂಡೂರು ತಾಲೂಕುಗಳಲ್ಲಿ ಅತೀ ಹೆಚ್ಚು ಪರಿಶಿಷ್ಟ ವರ್ಗದ ಜನಸಂಖ್ಯೆ ಹೊಂದಿರುವ ಗ್ರಾಮಗಳಲ್ಲಿ ಫೆ.06 ರಿಂದ 11 ರ ವರೆಗೆ ಉಚಿತ ಆರೋಗ್ಯ ಚಿಕಿತ್ಸಾ ಶಿಬಿರ ಕಾರ್ಯಗಾರವನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಅವರು ತಿಳಿಸಿದ್ದಾರೆ.

ಜಿಲ್ಲೆಯ ಬುಡಕಟ್ಟು ಪ್ರದೇಶಗಳ ಜನಾಂಗದವರಿಗೆ ಮಧುಮೇಹ, ಅಧಿಕ ರಕ್ತದೊತ್ತಡ, ಹೃದಯ ರಕ್ತನಾಳದ ಕಾಯಿಲೆಗಳು, ಕ್ಯಾನ್ಸರ್, ರಕ್ತಹೀನತೆ ಮತ್ತು ಇತರೆ ಆರೋಗ್ಯ ಸ್ಥಿತಿಯನ್ನು ತಡೆಗಟ್ಟುವಂತಹ ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆ ನಡೆಸುವುದರ ಮೂಲಕ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಹಾಗೂ ಉಚಿತ ಚಿಕಿತ್ಸೆ ನೀಡಲು ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ.

ಫೆ.06 ರಂದು ಬಳ್ಳಾರಿ ತಾಲ್ಲೂಕು ವ್ಯಾಪ್ತಿಯ ಗೋಡೆಹಾಳ್, ಮೀನಹಳ್ಳಿ, ಕುಂಟನಹಾಳ್, ರಾಯಪುರ, ಬುರ್ರನಾಯಕನಹಳ್ಳಿ ಗ್ರಾಮಗಳಲ್ಲಿ ನಡೆಯಲಿದೆ. ಫೆ.07 ರಂದು ಭೈರದೇವನಹಳ್ಳಿ, ಚಾಗನೂರು, ಸಿಂಧವಾಳ ಗ್ರಾಮಗಳಲ್ಲಿ ನಡೆಯಲಿದೆ.

ಫೆ.08 ರಂದು ಸಿರುಗುಪ್ಪ ತಾಲ್ಲೂಕಿನ ಹಾವಿನಹಾಳ್, ಮಣ್ಣೂರ್ ಗ್ರಾಮಗಳು. ಫೆ.09 ರಂದು ಕುರುಗೋಡು ತಾಲ್ಲೂಕಿನ ಮುಷ್ಟಗಟ್ಟೆ ಗ್ರಾಮ. ಫೆ.10 ರಂದು ಕಂಪ್ಲಿ ತಾಲ್ಲೂಕಿನ ಜವುಕು ಗ್ರಾಮ. ಫೆ.11 ರಂದು ಸಂಡೂರು ತಾಲ್ಲೂಕಿನ ಮಾಳಪುರ, ಮಲ್ಲಾಪುರ ಗ್ರಾಮಗಳಲ್ಲಿ ನಡೆಯಲಿದೆ ತಿಳಿಸಿದ್ದಾರೆ.

# ಗಾಂಧೀಜಿಯ ಜೀವನ-ಸಂದೇಶ ಪ್ರಬಂಧಸ್ಪರ್ಧೆ


### ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಗೆ ರಾಜ್ಯಾದ್ಯಂತ 12 ಸಾವಿರ ವಿದ್ಯಾರ್ಥಿಗಳು ಭಾಗಿ । ವಿಜೇತರಿಗೆ ಸಿಎಂ ಸಿದ್ದರಾಮಯ್ಯ ಬಹುಮಾನ ವಿತರಣೆ

**ಹಂಪಿ ಟೈಮ್ಸ್ ಹೊಸಪೇಟೆ**

ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗೆ ನಡೆಸಿದ ಪ್ರಯೋಗಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿ ನಿಮಿತ್ತ ಆಯೋಜಿಸಿದ್ದ ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಹುಮಾನಗಳನ್ನು ವಿತರಿಸಿದರು.

ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮಂಗಳವಾರ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ರಾಜ್ಯ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತ 9 ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳು, ಸ್ಮರಣಿಕೆ ಹಾಗೂ ಗಾಂಧೀಜಿ ಅವರ ಜೀವ ಸಂದೇಶಗಳ ಕುರಿತು ಪುಸ್ತಕಗಳನ್ನು ವಿತರಿಸಿ ಶುಭಕೋರಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿ ಸಂದರ್ಭದಲ್ಲಿ ವಿದ್ಯಾರ್ಥಿ, ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಜೀವನ-ಸಂದೇಶ ಹಾಗೂ ಅವರು ಸವೆಸಿದ ಹಾದಿ ಹಾಗೂ ಅವರು ಜೀವನದುದ್ದಕ್ಕೂ ಪಾಲಿಸಿಕೊಂಡು ಆದರ್ಶಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸುಮಾರು 12 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿರುವುದು ಸಂತಸದ ಸಂಗತಿ ಎಂದರು.



ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳಕರ್ ಅವರು ಮಾತನಾಡಿ, ಗಾಂಧೀಜಿಯವರ ಜನ್ಮದಿನದ ನಿಮಿತ್ತ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ನನಗೇಕೆ ಗಾಂಧೀಜಿ ಇಷ್ಟವಾಗುತ್ತಾರೆ, ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ. ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು. ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ವಿಷಯಗಳಿಗೆ ಸಂಬಂಧಿಸಿದಂತೆ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿತ್ತು ಎಂದರು.

ಜಿಲ್ಲಾಮಟ್ಟದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಜಿಲ್ಲಾ ಹಂತದಲ್ಲಿಯೇ ಬಹುಮಾನ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದ ಪ್ರಬಂಧಗಳನ್ನು ರಾಜ್ಯಮಟ್ಟದ ಸ್ಪರ್ಧೆಗೆ ಪರಿಗಣಿಸಲಾಗಿತ್ತು ಎಂದರು.

ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳ ಪ್ರಬಂಧಗಳನ್ನು ರಾಜ್ಯ ಮಟ್ಟದ ಸ್ಪರ್ಧೆಗೆ ಪರಿಗಣಿಸಲಾಗಿತ್ತು. ಮೂರು ವಿಭಾಗಗಳಲ್ಲಿ ಪ್ರತ್ಯೇಕವಾಗಿ ಪ್ರಥಮ ಸ್ಥಾನ-31,000, ದ್ವಿತೀಯ-21,000 ಹಾಗೂ ತೃತೀಯ-11,000 ರೂ.ಗಳ ನಗದು ಪುರಸ್ಕಾರ ನೀಡಲಾಯಿತು.

**ವಿಜೇತರ ವಿವರ:** ಪ್ರೌಢಶಾಲೆ ವಿಭಾಗದಲ್ಲಿ ಪ್ರಥಮ-ಅನಿರುದ್ಧ ಮನೋಜ್, ಸಂತ ಅನ್ನಮ್ಮ ಪ್ರೌಢಶಾಲೆ, ವಿರಾಜಪೇಟೆ, ಕೊಡಗು ಜಿಲ್ಲೆ, ದ್ವಿತೀಯ-ಹರ್ಷಿತ ಎನ್, ಸರ್ಕಾರಿ ಪ್ರೌಢಶಾಲೆ, ತುಂಗಣಿ, ಕನಕಪುರ ತಾ. ರಾಮನಗರ ಜಿಲ್ಲೆ, ತೃತೀಯ - ತೋಹಿದ್ ಅಹ್ಮದ್ ಲಾಡಜಿ, ಗೈಡ್ ಆಂಗ್ಲ ಮಾಧ್ಯಮ ಶಾಲೆ, ತಿಳವಳ್ಳಿ, ಹಾನಗಲ್ ತಾಲ್ಲೂಕು, ಹಾವೇರಿ ಜಿಲ್ಲೆ.

ಪದವಿ ಪೂರ್ವ ವಿಭಾಗದಲ್ಲಿ ಪ್ರಥಮ-ಹೃತ್ಪೂರ್ವಕ್ ಕೆ.ಎಸ್. ಸಂತ ಮೈಕೇಲ್ ಕಾಲೇಜು, ಮಡಿಕೇರಿ ಕೊಡಗು ಜಿಲ್ಲೆ, ದ್ವಿತೀಯ-ಉದಯಕುಮಾರ್ ಎಂ.ಎಸ್. ಸರ್ಕಾರಿ ಪ.ಪೂ.ಕಾಲೇಜು ಮಂಡ್ಯ, ತೃತೀಯ-ಮೀನ ಎಂ, ಶ್ರೀಕೊಂಗಾಡಿಯಪ್ಪ ಪಿ.ಯು.ಕಾಲೇಜು, ದೊಡ್ಡಬಳ್ಳಾಪುರ ಬೆಂಗಳೂರು ಗ್ರಾಮಾಂತರ ಜಿಲ್ಲೆ

ಪದವಿ/ಸ್ನಾತಕೋತ್ತರ ವಿಭಾಗದಲ್ಲಿ ಪ್ರಥಮ-ದರ್ಶಿನಿ ಡಿ,ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಶಿವಮೊಗ್ಗ, ದ್ವಿತೀಯ-ಕಾವ್ಯಾ ಚಿಪ್ಪಲಕಟ್ಟಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಗಲಕೋಟ, ತೃತೀಯ-ಕುಸುಮಾಬಾಯಿ ಆರ್, ಜೆಎಸ್.ಎಸ್ ಕಲಾ ಕಾಲೇಜು ಮೈಸೂರು ಇವರು ವಿಜೇತರಾಗಿದ್ದಾರೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ಮುಖ್ಯಮಂತ್ರಿಯವರ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯದರ್ಶಿಗಳಾದ ಡಾ. ಕೆ.ವಿ.ತ್ರಿಲೋಕಚಂದ್ರ, ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್, ಇಲಾಖೆಯ ಜಂಟಿ ನಿರ್ದೇಶಕರುಗಳಾದ ಮಂಜುನಾಥ ಡೊಳ್ಳಿನ್, ಸಿದ್ದೇಶ್ವರಪ್ಪ ಜಿ.ಬಿ, ಉಪನಿರ್ದೇಶಕ ರಾಮಲಿಂಗಪ್ಪ ಬಿ.ಕೆ. ಮತ್ತಿತರರು ಇದ್ದರು.

# ಕಡಿಮೆ ವೋಲ್ಟೇಜ್ ವಿದ್ಯುತ್ ಪೂರೈಕೆ ನೀರೆತ್ತದ ಪಂಪ್‌ಗಳು, ರೈತರು ತತ್ತರ

**ಹಂಪಿ ಟೈಮ್ಸ್ ಹರಪನಹಳ್ಳಿ**

ರೈತರ ಪಂಪಸೆಟ್‌ಗಳಿಗೆ ಪೂರೈಸುತ್ತಿರುವ ವಿದ್ಯುತ್ ಕಡಿಮೆ ವೋಲ್ಟೇಜ್ ಆಗಿದ್ದು, ಪಂಪಸೆಟ್‌ಗಳು ನೀರುತ್ತಲು ಸಾಧ್ಯವಾಗುತ್ತಿಲ್ಲ. ರೈತರ ಪಂಪ್ ಸೆಟ್‌ಗಳಿಗೆ ಎರಡು ಹಂತದಲ್ಲಿ ವಿದ್ಯುತ್ ಪ್ರಸರಣ ಮಾಡಬೇಕು, ಪೂರ್ಣ ಪ್ರಮಾಣದ ವೋಲ್ಟೇಜ್ ವಿದ್ಯುತ್ ಪೂರೈಸಬೇಕೆಂದು ಒತ್ತಾಯಿಸಿ ರೈತರು ದಿಢೀರ್ ಪ್ರತಿಭಟನೆ ನಡೆಸಿದರು.



ರೈತ ಮುಖಂಡರಾದ ಎಸ್.ಜಾತಪ್ಪ ಮಾತನಾಡಿ, ಈ ವರ್ಷ ಬರಗಾಲ ಬಂದಿರುವುದರಿಂದ ಈ ಭಾಗದ ಹಳ್ಳಿಗಳಲ್ಲಿ ರೈತರ ಪಂಪ್ ಸೆಟ್ ಗಳಿಗೆ ಒಂದೇ ಹಂತದಲ್ಲಿ ವಿದ್ಯುತ್ ನೀಡುತ್ತಿರುವುದು ಹಾಗೂ ವೋಲ್ಟೇಜ್ ಕಡಿಮೆ ಇರುವುದರಿಂದ ರೈತರಿಗೆ ಬಹಳ ಸಮಸ್ಯೆ ಆಗಿದೆ, ದನ ಕರುಗಳಿಗೆ ನೀರು ಹಾಗೂ ಮೇವಿನ ಕೊರತೆಯಾಗಿದೆ, ನಾವು ಬೆಳೆದ ಬೆಳೆಯೆಲ್ಲಾ ನಾಶವಾಗುತ್ತಿದೆ.

ಎರಡು ವರ್ಷದಿಂದ ಅರಸೀಕೆರೆಯಲ್ಲಿ ಹೊಸ ವಿದ್ಯುತ್ ಪ್ರಸರಣ ಘಟಕ ಪ್ರಾರಂಭವಾಗುತ್ತದೆ ಎಂದು ಅಧಿಕಾರಿಗಳು ಸುಳ್ಳು ಹೇಳಿಕೊಂಡು ಬರುತ್ತಿದ್ದಾರೆ.

ಸರ್ಕಾರ, ಚುನಾಯಿತ ಪ್ರತಿನಿಧಿಗಳು ಈ ನಮ್ಮ ಸಮಸ್ಯೆಯ ಬಗ್ಗೆ ಯಾವುದೇ ಕ್ರಮ ತೆಗೆದುಕೊಳ್ಳುತ್ತಿಲ್ಲ, ಎಷ್ಟೋ ಬಾರಿ ಅಧಿಕಾರಿಗಳಿಗೆ ಮನವಿ ಹಾಗೂ ಪ್ರತಿಭಟನೆ ಮಾಡಿದರು ಸಹ ಹೊಸ ವಿದ್ಯುತ್ ಪ್ರಸರಣ ಘಟಕ ಪ್ರಾರಂಭವಾಗಿಲ್ಲ. ಕೂಡಲೇ ಈ ಸಮಸ್ಯೆ ಬಗೆಹರಿಯದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದೆಂದು ಪ್ರತಿಭಟನಾನಿರತ ರೈತರು ಎಚ್ಚರಿಸಿದರು.

ಪುಣಭಘಟ್ಟ ವಿದ್ಯುತ್ ಪ್ರಸರಣ ಘಟಕದ ವ್ಯವಸ್ಥಾಪಕರಾದ ಅಂಜಲಿ ಯವರಿಗೆ ಮನವಿ ಸಲ್ಲಿಸಿ, ತಾಲ್ಲೂಕು ವಿದ್ಯುತ್ ಪ್ರಸರಣ ಕೇಂದ್ರಕ್ಕೆ ತೆರಳಿ ಮನವಿ ಸಲ್ಲಿಸಿದರು. ರೈತ ಮುಖಂಡರಾದ ಆನಂದಪ್ಪ, ಹೆಚ್. ಹನುಮಂತಪ್ಪ, ಗುರುಮೂರ್ತಿ, ಹೆಚ್. ಭರಮನ ಗೌಡ, ಹೆಚ್. ಎಸ್.ಮಹಾಂತೇಶಪ್ಪ, ಪೂಜಾರ್ ಸುರೇಶ್, ಹೆಚ್. ಕರಿಬಸಪ್ಪ, ಶಂಕರಪ್ಪ, ಶಿವಕುಮಾರ್, ನಾಗರಾಜ್, ಶಾಂತಕುಮಾರ್, ಹಾಲೇಶ್ ಇತರರು ಇದ್ದರು.

# ಕೋಗಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರಾಜ್ಯ ಮಟ್ಟದ ಕಾಯಕಲ್ಪ ಪ್ರಶಸ್ತಿ




**ಹಂಪಿ ಟೈಮ್ಸ್ ಹೊಸಪೇಟೆ**

ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಕೋಗಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರಾಜ್ಯ ಮಟ್ಟದ ಕಾಯಕಲ್ಪ ಪ್ರಶಸ್ತಿ ಮತ್ತು ಎರಡು ಲಕ್ಷ ರೂಪಾಯಿ ನಗದು ಬಹುಮಾನ ನೀಡಿ ರಾಜ್ಯ ಸರ್ಕಾರ ಗೌವರವಿಸಿದೆ.

ಮೈಸೂರಿನಲ್ಲಿ ಮಂಗಳವಾರ ಜರುಗಿದ 2022-2023 ನೇ ಸಾಲಿನ ಕಾಯಕಲ್ಪ ರಾಜ್ಯ ಮಟ್ಟದ ಪ್ರಶಸ್ತಿ ಸಮಾರಂಭದಲ್ಲಿ ಪ್ರಶಸ್ತಿ ಹಾಗೂ ನಗದು ಬಹುಮಾನ ಸ್ವೀಕರಿಸಿದರು.

ಸಚಿವ ದಿನೇಶ್ ಗುಂಡೂರಾವ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಎಂ.ಡಿ. ಎನ್.ಹೆಚ್.ಎಂ. ಡಾ ನವೀನ ಭಟ್., ಜೆ.ಎನ್.ಶ್ರೀವಾಸ್ತವ ಸಲಹೆಗಾಗರು ಗುಣಮಟ್ಟ ಮತ್ತು ರೋಗಿಯ ಆರೈಕೆ ಎನ್ ಹೆಚ್ ಎಸ್ ಆರ್ ಸಿ ನವದೆಹಲಿ ಭಾರತ ಸರ್ಕಾರ., ಡಾ.ರಾಜಕುಮಾರ ರಾಜ್ಯ ಡಿ ಡಿ ಅಧಿಕಾರಿಗಳು., ಪಿ.ಡಿ.ಅರ್.ಸಿ.ಹೆಚ್.ಡಾ.ಶ್ರೀನಿವಾಸ., ಡಾ.ವಿನಯ್. ಎಂ. ವಿಜಯನಗರ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳು., ಜಿಲ್ಲಾ ಗುಣಮಟ್ಟ ಖಾತರಿ ಅಧಿಕಾರಿಗಳು ಡಾ. ಗುರುಪ್ರಸಾದ ಜಿಲ್ಲಾ ಆಡಳಿತ ಮತ್ತು ಕಾರ್ಯಕ್ರಮ ಸಲಹೆಗಾರರು.ಕಿರಣ್, ಡಾ. ಶಂಕರ್ ನಾಯ್ಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅದಿಕಾರಿಗಳು ವಿಜಯನಗರ, ಪ್ರಾಥಮಿಕ ಆರೋಗ್ಯ ಕೇಂದ್ರ ಕೊಗಳಿಯ ವೈದ್ಯಾಧಿಕಾರಿಗಳಾದ ಡಾ.ಗಂಗಾ ಎಂ., ಡಾ.ಎಂ.ಧರ್ಮನಗೌಡ. ಹಿರಿಯ ಅರೋಗ್ಯ ನಿರೀಕ್ಷಣಾಧಿಕಾರಿಗಳು, ಡಾ.ಶ್ರೀನಿವಾಸ ರೆಡ್ಡಿ ಹಿರಿಯ ಅರೋಗ್ಯ ನಿರೀಕ್ಷಣಾಧಿಕಾರಿಗಳು, ಬಿ.ವಿಶ್ವಪತಿ ಅರೋಗ್ಯ ನಿರೀಕ್ಷಣಾಧಿಕಾರಿಗಳು, ಸಮುದಾಯ ಆರೋಗ್ಯ ಅಧಿಕಾರಿಗಳಾದ ಆರ್. ರಘುಪತಿ ಮಂಜುನಾಥ.ಕೆ ಆರ್, ಐಶ್ವರ್ಯ, ಬಿ ವಿಜಯ ಮಹಾಂತೇಶಗೌಡ ಹೆಚ್ ಐ ಓ ಹಾಗು ಆಶಾಕಾರ್ಯಕರ್ತೆಯರು ಇದ್ದರು.

## ತುಂಗಭದ್ರಾ ನೀರಿನ ಮಟ್ಟ



| ಮಂಗಳವಾರ: 06-02-2024 | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1588.13 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 266 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 9.539 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| **ಕಳೆದ ವರ್ಷ ಇದೇ ದಿನ** | |
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1614.45 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 9658 ಕ್ಯುಸೆಕ್ |
| ಸಾಮರ್ಥ್ಯ | 47.128 ಟಿಎಂಸಿ |

## ಸಂವಿಧಾನ ಜಾಗೃತಿ ಜಾಥಾಗೆ ಅದ್ದೂರಿ ಸ್ವಾಗತ

**ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಎಲ್ಲಾ ತಾಲೂಕಿನ ಗ್ರಾಮಗಳಲ್ಲಿ ಸಂಚರಿಸುತ್ತಿರುವ ಸಂವಿಧಾನ ಜಾಗೃತಿ ರಥವು ಸೋಮವಾರದಂದು ಸಿರುಗುಪ್ಪ ತಾಲ್ಲೂಕಿನ ಬೀರಹಳ್ಳಿ, ಹಚ್ಚೊಳ್ಳಿ, ಕುಡದರಹಾಳ್, ಬಾಗೇವಾಡಿ ಹಾಗೂ ದೇಶನೂರು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸಂಚರಿಸಿದ್ದು, ಸಿರುಗುಪ್ಪ ತಾಲ್ಲೂಕಿನ ಬಾಗೇವಾಡಿ ಗ್ರಾಮದಲ್ಲಿ ಶಾಸಕ ಬಿ.ಎಂ.ನಾಗರಾಜ ಅವರು ಸಂವಿಧಾನ ಜಾಗೃತಿ ಜಾಥಾವನ್ನು ಅದ್ದೂರಿಯಾಗಿ ಸ್ವಾಗತಿಸಿಕೊಂಡರು. ಬಾಗೇವಾಡಿ ಗ್ರಾಮದಲ್ಲಿ ದಾರಿಯುದ್ದಕ್ಕೂ ಜಾಥಾದ ಜೊತೆಗೆ ಹೆಜ್ಜೆ ಹಾಕಿ ಗ್ರಾಮಸ್ಥರಲ್ಲಿ ಹೊಸ ಹುಮ್ಮಸ್ಸು ಮೂಡಿಸಿದರು.






Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA